ದಾವಣಗೆರೆಯಿಂದ

ಮುಂಜಾನೆಯ ಮೆರಗು

ಸಂಪಾದಕ: ರವಿಕುಮಾರ ಜೆ.ಓ

MUNJANEYA MERAGU

ಕನ್ನಡ ದಿನಪತ್ರಿಕೆ

Editor : RAVIKUMARA J.O.

KA/SK/DVG-049/2026-2028

Kannada Daily

Davangere **Volume :**1 **Issue:** 141 Monday **16-11-2026 PRGI. NO. KNKAN/26/A4616,** Mob:- 8880222429 Page : 4 **Price :** 2-00/-

ದಾವಣಗೆರೆ ಸಂಪುಟ : 1 ಸಂಚಿಕೆ : 141 ಸೋಮವಾರ **Email:** munjaneyameragu@gmail.com ಮೊ: 8880222429 ಪುಟ : 4 ಬೆಲೆ–ರೂ.2.00/–

ರಸ್ತೆ ಅಗಲೀಕರಣಕ್ಕೆ ವಿರೋಧ; ಚರಂಡಿ ಒತ್ತುವರಿಗೆ ಮುಂದು!

ಅಧಿಕಾರಿಗಳ ಮೌನಕ್ಕೆ ಸಾರ್ವಜನಿಕರ ಆಕ್ರೋಶ

“ಮುಂಜಾನೆಯ ಮೆರಗು”

ಜಗಳೂರು ನ, 15– ಸಾರ್ವಜನಿಕರ ಸುಗಮ ಸಂಚಾರಕ್ಕಾಗಿ ರಸ್ತೆ ಅಗಲೀಕರಣಕ್ಕೆ ಒಂದು ಇಂಚು ಜಾಗವನ್ನೂ ಬಿಟ್ಟುಕೊಡಲು ಹಿಂದೇಟು ಹಾಕಿದ ಕೆಲ ಕಟ್ಟಡ ಮಾಲೀಕರು, ಇದೀಗ ಸರ್ಕಾರದ ಸ್ವತ್ತಾದ ಚರಂಡಿಯ ಮೇಲೆಯೇ ಮೆಟ್ಟಿಲುಗಳನ್ನು ನಿರ್ಮಿಸಿಕೊಂಡು ವ್ಯಾಪಾರ ವಹಿವಾಟು ನಡೆಸಲು ಮುಂದಾಗಿರುವುದು ಸಾರ್ವಜನಿಕ ವಲಯದಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿದೆ.

ಪಟ್ಟಣದ ಅಂಬೇಡ್ಕರ್ ವೃತ್ತದಿಂದ ಚಳ್ಳಕೆರೆ ಗೇಟ್‌ವರೆಗಿನ ರಸ್ತೆ ಅಭಿವೃದ್ಧಿ ಕಾಮಗಾರಿ ಪ್ರಗತಿಯಲ್ಲಿದೆ. ಲೋಕೋಪಯೋಗಿ ಇಲಾಖೆಯ ವತಿಯಿಂದ ಸುಮಾರು 20 ಕೋಟಿ ವೆಚ್ಚದಲ್ಲಿ ಸಿಸಿ ರಸ್ತೆ ಹಾಗೂ ಬಾಕ್ಸ್ ಚರಂಡಿ ನಿರ್ಮಾಣ ಕಾರ್ಯ ಕೈಗೊಳ್ಳಲಾಗಿದೆ. ಆದರೆ, ಅಂಬೇಡ್ಕರ್ ವೃತ್ತದಿಂದ ಹಳೆ ಗಾಂಧಿ ವೃತ್ತದವರೆಗಿನ ರಸ್ತೆಯ ಇಕ್ಕೆಲಗಳಲ್ಲಿರುವ ಕೆಲವು ಕಟ್ಟಡ ಮಾಲೀಕರು ಚರಂಡಿಯ ಮೇಲೆಯೇ ಮೆಟ್ಟಿಲುಗಳನ್ನು ನಿರ್ಮಿಸಿಕೊಳ್ಳುತ್ತಿರುವುದು ಸಾರ್ವಜನಿಕರ ಅಸಮಾಧಾನಕ್ಕೆ ಕಾರಣವಾಗಿದೆ.

ರಸ್ತೆ ಅಗಲೀಕರಣಕ್ಕೆ ವಿರೋಧ; ಜನಹಿತದ ಕೆಲಸಕ್ಕೆ ಅಡ್ಡಿ!

ಜಗಳೂರು ಪಟ್ಟಣದ ಪ್ರಮುಖ ರಸ್ತೆಗಳು ಕಿರಿದಾಗಿದ್ದು, ವಾಹನಗಳ ಸಂಚಾರಕ್ಕೆ ತೀವ್ರ ತೊಂದರೆಯಾಗುತ್ತಿತ್ತು. ಜನದಟ್ಟಣೆ ಹೆಚ್ಚಿರುವ ಈ ಮಾರ್ಗದಲ್ಲಿ ಪದೇಪದೇ ಅಪಘಾತಗಳು ಸಂಭವಿಸಿ



ಅಮೂಲ್ಯ ಜೀವಗಳು ಬಲಿಯಾಗಿರುವ ಘಟನೆಗಳೂ ನಡೆದಿವೆ. ಈ ಹಿನ್ನೆಲೆಯಲ್ಲಿ ಸಾರ್ವಜನಿಕರ ಸುಗಮ ಸಂಚಾರ ಹಾಗೂ ಭವಿಷ್ಯದ ಪಟ್ಟಣದ ಅಭಿವೃದ್ಧಿಯನ್ನು ದೃಷ್ಟಿಯಲ್ಲಿಟ್ಟುಕೊಂಡು ಶಾಸಕ ಬಿ. ದೇವೇಂದ್ರಪ್ಪ ಅವರು ರಸ್ತೆ ಅಗಲೀಕರಣಕ್ಕೆ ಮುಂದಾಗಿದ್ದರು.

ಆದರೆ, ರಸ್ತೆ ಬದಿಯ ಕೆಲವು ಕಟ್ಟಡ ಮಾಲೀಕರು ತಮ್ಮ ಕಟ್ಟಡಗಳ ಜಾಗ ತೆರವುಗೊಳಿಸಲು ವಿರೋಧ ವ್ಯಕ್ತಪಡಿಸಿ ನ್ಯಾಯಾಲಯದ ಮೊರೆ ಹೋಗಿದ್ದರು. ಮತ್ತೊಂದೆಡೆ, ಪಟ್ಟಣದ ಅಭಿವೃದ್ಧಿ ಹಾಗೂ ಸಾರ್ವಜನಿಕರ ಹಿತದೃಷ್ಟಿಯಿಂದ ಕೆಲವರು ಸ್ವಯಂಪ್ರೇರಿತರಾಗಿ ಸಹಕಾರ ನೀಡಿ ಕಟ್ಟಡಗಳ ಭಾಗಗಳನ್ನು ತೆರವುಗೊಳಿಸಿದ್ದರು.

ರಸ್ತೆ ಅಗಲೀಕರಣದ ವಿಚಾರದಲ್ಲಿ ಶಾಸಕರು ಸಾಕಷ್ಟು ಮನವೊಲಿಕೆ ಪ್ರಯತ್ನ ನಡೆಸಿ, ಜನರಿಗೆ ಅನುಕೂಲವಾಗುವ ಉತ್ತಮ ಕಾರ್ಯಕ್ಕೆ ಕೈಹಾಕಿದ್ದರು. ಈ ಸಂದರ್ಭದಲ್ಲಿ ಕೆಲವರ ವಿರೋಧದ ನಡುವೆಯೂ ಕಾಮಗಾರಿ ಮುಂದುವರಿದಿರುವುದು ಗಮನಾರ್ಹ.

ಚರಂಡಿಯೂ ಖಾಸಗಿ ಆಸ್ತಿಯೇ?

ರಸ್ತೆ ಅಭಿವೃದ್ಧಿಯ ಭಾಗವಾಗಿ ಬಾಕ್ಸ್ ಚರಂಡಿ ನಿರ್ಮಿಸಿ, ಅದರ ಮೇಲೆ ಸ್ಲ್ಯಾಬ್ ಅಳವಡಿಸುವ ಕಾಮಗಾರಿ ನಡೆಯುತ್ತಿದೆ. ಆದರೆ, ಚರಂಡಿ ನಿರ್ಮಾಣ ಪೂರ್ಣಗೊಳ್ಳುವ ಮುನ್ನವೇ ಅಥವಾ ಸ್ಲ್ಯಾಬ್ ಅಳವಡಿಸಿದ ಬಳಿಕ ಕೆಲ ಕಟ್ಟಡ ಮಾಲೀಕರು ತಮ್ಮ ಅಂಗಡಿ ಹಾಗೂ ಕಟ್ಟಡಗಳಿಗೆ ಅನುಕೂಲವಾಗುವಂತೆ ಚರಂಡಿಯ ಮೇಲೆಯೇ ಮೆಟ್ಟಿಲುಗಳನ್ನು ನಿರ್ಮಿಸಿಕೊಳ್ಳುತ್ತಿದ್ದಾರೆ ಎಂಬ ಆರೋಪ ಕೇಳಿಬಂದಿದೆ.

ಚರಂಡಿಯ ಮೇಲಿನ ಅಕ್ರಮ ಮೆಟ್ಟಿಲುಗಳಿಂದ ಮಳೆನೀರು ಸರಾಗವಾಗಿ ಹರಿಯಲು ಅಡ್ಡಿಯಾಗುವುದರ ಜತೆಗೆ, ಚರಂಡಿ ಸ್ವಚ್ಛತೆ ಹಾಗೂ ನಿರ್ವಹಣೆಯಲ್ಲಿಯೂ ಸಮಸ್ಯೆ ಉಂಟಾಗುವ ಸಾಧ್ಯತೆಯಿದೆ. ಅಲ್ಲದೆ, ಪಾದಚಾರಿಗಳ ಸಂಚಾರಕ್ಕೂ ತೊಂದರೆಯಾಗುವ ಆತಂಕವಿದೆ.

ಅಧಿಕಾರಿಗಳ ಮೌನಕ್ಕೆ ಸಾರ್ವಜನಿಕರ ಆಕ್ರೋಶ

ಸರ್ಕಾರಿ ಜಾಗದಲ್ಲಿ ಯಾವುದೇ ರೀತಿಯ ಅನಧಿಕೃತ ನಿರ್ಮಾಣ ನಡೆಯುತ್ತಿದ್ದರೆ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ತಕ್ಷಣವೇ ಸ್ಥಳ ಪರಿಶೀಲನೆ ನಡೆಸಿ ಕ್ರಮ ಕೈಗೊಳ್ಳಬೇಕಿದೆ. ಆದರೆ, ಕಾಮಗಾರಿ ನಡೆಯುತ್ತಿರುವ ಸ್ಥಳದಲ್ಲಿಯೇ ಚರಂಡಿಯ ಮೇಲೆ ಮೆಟ್ಟಿಲುಗಳನ್ನು ನಿರ್ಮಿಸಿಕೊಳ್ಳುತ್ತಿದ್ದರೂ ಸಂಬಂಧಪಟ್ಟ ಅಧಿಕಾರಿಗಳು ಮೌನ ವಹಿಸಿರುವುದು ಹಲವು ಅನುಮಾನಗಳಿಗೆ ಎಡೆಮಾಡಿಕೊಟ್ಟಿದೆ.

ಒತ್ತುವರಿ ತೆರವಿಗೆ ಹೋರಾಟಗಾರರ ಆಗ್ರಹ

ಸಾರ್ವಜನಿಕರ ಅನುಕೂಲಕ್ಕಾಗಿ ರಸ್ತೆ ಅಗಲೀಕರಣಕ್ಕೆ ಮುಂದಾದಾಗ ಸಹಕಾರ ನೀಡದ ಕೆಲ ಕಟ್ಟಡ ಮಾಲೀಕರು ಇದೀಗ ಸರ್ಕಾರಿ ಚರಂಡಿಯ ಮೇಲೆ ಮೆಟ್ಟಿಲುಗಳನ್ನು ನಿರ್ಮಿಸಿಕೊಳ್ಳುತ್ತಿರುವುದು ಸರಿಯಲ್ಲ. ಸಾರ್ವಜನಿಕರ ಆಸ್ತಿಯನ್ನು ಖಾಸಗಿ ಸ್ವತ್ತಿನಂತೆ ಬಳಸಿಕೊಳ್ಳಲು ಯಾರಿಗೂ ಅಧಿಕಾರವಿಲ್ಲ. ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಸ್ಥಳ ಪರಿಶೀಲನೆ ನಡೆಸಿ ಅನಧಿಕೃತ ಮೆಟ್ಟಿಲುಗಳನ್ನು ತೆರವುಗೊಳಿಸಬೇಕು ಎಂದು ಸಾಮಾಜಿಕ



ಹೋರಾಟಗಾರ ರಾಘವೇಂದ್ರ ಒತ್ತಾಯಿಸಿದ್ದಾರೆ.

ಸಾರ್ವಜನಿಕರಿಗಾಗಿ ತಮ್ಮ ಸ್ವಂತ ಜಾಗದಿಂದ ಒಂದು ಇಂಚು ಜಾಗವನ್ನೂ ಬಿಟ್ಟುಕೊಡಲು ಹಿಂದೇಟು ಹಾಕುವ ಕೆಲ ಕಟ್ಟಡ ಮಾಲೀಕರು, ಸರ್ಕಾರದ ಜಾಗವನ್ನು ಒತ್ತುವರಿ ಮಾಡಿಕೊಳ್ಳಲು ಮುಂದಾಗಿರುವುದು ಎಷ್ಟು ಸರಿ ಎಂಬುದನ್ನು ಆತ್ಮಾವಲೋಕನ ಮಾಡಿಕೊಳ್ಳಬೇಕು. ಸಾರ್ವಜನಿಕ ಆಸ್ತಿ ಎಂದರೆ ಎಲ್ಲರಿಗೂ ಸೇರಿದ್ದು, ಅದನ್ನು ಸಂರಕ್ಷಿಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ ಎಂದು ಮಾಹಿತಿ ಹಕ್ಕು ಹೋರಾಟಗಾರ ಚಾಂದ್ ಪೀರ್ ಅಭಿಪ್ರಾಯಪಟ್ಟಿದ್ದಾರೆ.

ಅಭಿವೃದ್ಧಿ ಎಂದರೆ ಕೇವಲ ರಸ್ತೆ ನಿರ್ಮಾಣವಲ್ಲ; ನಿರ್ಮಿಸಿದ ಸಾರ್ವಜನಿಕ ಆಸ್ತಿಯನ್ನು ಸಂರಕ್ಷಿಸುವುದೂ ಅಷ್ಟೇ ಮುಖ್ಯ. ಶಾಸಕ ಬಿ. ದೇವೇಂದ್ರಪ್ಪ ಅವರ ಪ್ರಯತ್ನದಿಂದ ಪಟ್ಟಣದ ರಸ್ತೆ ಅಭಿವೃದ್ಧಿಗೆ ಹೊಸ ರೂಪ ಸಿಗುತ್ತಿರುವಾಗ, ಅದಕ್ಕೆ ಪೂರಕವಾಗಿ ಚರಂಡಿಗಳನ್ನೂ ಸಂರಕ್ಷಿಸಬೇಕಿದೆ. ಇಲ್ಲದಿದ್ದರೆ ಕೋಟ್ಯಂತರ ರೂಪಾಯಿ ವೆಚ್ಚದಲ್ಲಿ ನಿರ್ಮಾಣವಾಗುತ್ತಿರುವ ಕಾಮಗಾರಿಯ ಉದ್ದೇಶವೇ ವಿಫಲವಾಗುವ ಸಾಧ್ಯತೆಯಿದೆ.

ಹೀಗಾಗಿ ಸಂಬಂಧಪಟ್ಟ ಲೋಕೋಪಯೋಗಿ ಇಲಾಖೆ ಹಾಗೂ ಪಟ್ಟಣ ಪಂಚಾಯಿತಿ ಅಧಿಕಾರಿಗಳು ಕೂಡಲೇ ಎಚ್ಚೆತ್ತುಕೊಂಡು, ಚರಂಡಿಯ ಮೇಲಿನ ಅನಧಿಕೃತ ಮೆಟ್ಟಿಲುಗಳ ಕುರಿತು ಪರಿಶೀಲನೆ ನಡೆಸಿ ನಿಯಮಾನುಸಾರ ಕ್ರಮ ಕೈಗೊಳ್ಳಬೇಕಿದೆ. ಸಾರ್ವಜನಿಕರ ತೆರಿಗೆ ಹಣದಿಂದ ನಿರ್ಮಾಣವಾಗುತ್ತಿರುವ ಆಸ್ತಿಯನ್ನು ಖಾಸಗಿ ಹಿತಾಸಕ್ತಿಗೆ ಬಲಿಯಾಗದಂತೆ ರಕ್ಷಿಸುವ ಜವಾಬ್ದಾರಿ ಅಧಿಕಾರಿಗಳ ಮೇಲಿದೆ.

ಮಕ್ಕಳಲ್ಲಿ ಅಡಗಿರುವ ಪ್ರತಿಭೆ ಗುರುತಿಸಿ ಪ್ರೋತ್ಸಾಹಿಸಬೇಕು: ಇ. ಸತೀಶ್

“ಮುಂಜಾನೆಯ ಮೆರಗು”

ಜಗಳೂರು ನ, 15– ಮಕ್ಕಳಲ್ಲಿರುವ ಸುಪ್ತ ಪ್ರತಿಭೆಯನ್ನು ಗುರುತಿಸಿ, ಅವರಿಗೆ ಸೂಕ್ತ ಪ್ರೋತ್ಸಾಹ ನೀಡುವ ಮೂಲಕ ಉತ್ತಮ ಭವಿಷ್ಯ ರೂಪಿಸಲು ಶಿಕ್ಷಕರು ಹಾಗೂ ಪೋಷಕರು ಶ್ರಮಿಸಬೇಕು ಎಂದು ಸರಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆಯ ಮುಖ್ಯೋಪಾಧ್ಯಾಯ ಇ. ಸತೀಶ್ ಹೇಳಿದರು.



ಪಟ್ಟಣದ ಬಯಲು ರಂಗಮಂದಿರದಲ್ಲಿರುವ ಸರಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆಯಲ್ಲಿ ಹಮ್ಮಿಕೊಂಡಿದ್ದ ಮಕ್ಕಳ ದಿನಾಚರಣೆ ಕಾರ್ಯಕ್ರಮವನ್ನು ಉದ್ದೇಶಿಸಿ ಅವರು ಮಾತನಾಡಿದರು.

ಮಕ್ಕಳು ದೇಶದ ಅಮೂಲ್ಯ ಸಂಪತ್ತು. ಇಂದಿನ ಮಕ್ಕಳೇ ಮುಂದಿನ ಸಮಾಜದ ಜವಾಬ್ದಾರಿಯುತ ನಾಗರಿಕರಾಗಿದ್ದು, ಅವರಲ್ಲಿ ಉತ್ತಮ ಸಂಸ್ಕಾರ, ಶಿಸ್ತು, ಮಾನವೀಯ ಮೌಲ್ಯ ಹಾಗೂ ದೇಶಪ್ರೇಮದ ಗುಣಗಳನ್ನು ಬೆಳೆಸಬೇಕು. ಮಕ್ಕಳಿಗೆ ಕೇವಲ ಪಠ್ಯಪುಸ್ತಕದ ಶಿಕ್ಷಣವಷ್ಟೇ ಅಲ್ಲದೆ, ಕ್ರೀಡೆ, ಸಾಂಸ್ಕೃತಿಕ ಚಟುವಟಿಕೆಗಳು ಹಾಗೂ ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಲು ಅವಕಾಶ ಕಲ್ಪಿಸಬೇಕು. ಇದರಿಂದ ಮಕ್ಕಳಲ್ಲಿ ಆತ್ಮವಿಶ್ವಾಸ, ನಾಯಕತ್ವ ಗುಣ ಮತ್ತು ಸೃಜನಶೀಲತೆ ಬೆಳೆಯಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಮಕ್ಕಳ ದಿನಾಚರಣೆಯ ಅಂಗವಾಗಿ ಶಾಲೆಯಲ್ಲಿ ಸಂಭ್ರಮದ ವಾತಾವರಣ ನಿರ್ಮಾಣವಾಗಿದ್ದು, ವಿದ್ಯಾರ್ಥಿಗಳು ಉತ್ಸಾಹದಿಂದ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಈ ಸಂದರ್ಭದಲ್ಲಿ ಶಾಲೆಯ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಮೂರು ತಿಂಗಳಿಂದ ಗೃಹಲಕ್ಷ್ಮಿ ಹಣಕ್ಕಾಗಿ ಮಹಿಳೆಯರ ಕಾಯುವಿಕೆ! ಆಗಸ್ಟ್‌ನಿಂದ ಫಲಾನುಭವಿಗಳ ಖಾತೆಗೆ ಜಮೆಯಾಗದ ಹಣ

“ಮುಂಜಾನೆಯ ಮೆರಗು”

ಜಗಳೂರು ನ, 15– ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಗೃಹಲಕ್ಷ್ಮಿ ಯೋಜನೆಯ ಹಣ ಬಿಡುಗಡೆ ವಿಳಂಬವಾಗುತ್ತಿರುವುದರಿಂದ ಮಹಿಳಾ ಫಲಾನುಭವಿಗಳು ಸಂಕಷ್ಟಕ್ಕೆ ಸಿಲುಕಿದ್ದಾರೆ. ಪ್ರತಿ ತಿಂಗಳು ಫಲಾನುಭವಿಗಳ ಬ್ಯಾಂಕ್ ಖಾತೆಗೆ ಜಮೆಯಾಗಬೇಕಿದ್ದ 2,000 ಹಣ ಇತ್ತೀಚಿನ ದಿನಗಳಲ್ಲಿ ಎರಡು–ಮೂರು ತಿಂಗಳಿಗೊಮ್ಮೆ ಬಿಡುಗಡೆಯಾಗುತ್ತಿರುವುದು ಮಹಿಳೆಯರಲ್ಲಿ ಅಸಮಾಧಾನಕ್ಕೆ ಕಾರಣವಾಗಿದೆ.

ಗೃಹಲಕ್ಷ್ಮಿ ಯೋಜನೆಯು ರಾಜ್ಯದ ಲಕ್ಷಾಂತರ ಕುಟುಂಬಗಳ ಮಹಿಳೆಯರಿಗೆ ಆರ್ಥಿಕ ಆಸರೆಯಾಗಿದ್ದು, ಅನೇಕ ಬಡ ಮತ್ತು ಮಧ್ಯಮ ವರ್ಗದ ಕುಟುಂಬಗಳ ದೈನಂದಿನ ಜೀವನ ನಿರ್ವಹಣೆಗೆ ಸಹಕಾರಿಯಾಗಿದೆ. ಮನೆ ಖರ್ಚು, ಮಕ್ಕಳ ಶಿಕ್ಷಣ, ಔಷಧೋಪಚಾರ ಸೇರಿದಂತೆ ಹಲವು ಅಗತ್ಯಗಳಿಗೆ ಈ ಹಣವನ್ನು



ಅವಲಂಬಿಸಿರುವ ಮಹಿಳೆಯರು ಇದೀಗ ಹಣಕ್ಕಾಗಿ ಕಾಯುವ ಪರಿಸ್ಥಿತಿ ನಿರ್ಮಾಣವಾಗಿದೆ.

ಆಗಸ್ಟ್, ಸೆಪ್ಟೆಂಬರ್, ಅಕ್ಟೋಬರ್ ಹಾಗೂ ನವೆಂಬರ್ ತಿಂಗಳ ಗೃಹಲಕ್ಷ್ಮಿ ಹಣ ಫಲಾನುಭವಿಗಳ ಬ್ಯಾಂಕ್ ಖಾತೆಗಳಿಗೆ ಜಮೆಯಾಗಬೇಕಿದೆ. ಆದರೆ ನಿರೀಕ್ಷಿತ ಸಮಯಕ್ಕೆ ಹಣ ಬಾರದಿರುವುದರಿಂದ ಮಹಿಳೆಯರು ಆತಂಕಕ್ಕೊಳಗಾಗಿದ್ದಾರೆ. ಕೆಲ ಮಹಿಳೆಯರಿಗೆ ಗೃಹಲಕ್ಷ್ಮಿ ಹಣವೇ ಕುಟುಂಬದ ಸಣ್ಣಪುಟ್ಟ ಖರ್ಚುಗಳಿಗೆ ಪ್ರಮುಖ ಜೀವನಾಧಾರವಾಗಿದೆ. ಹೀಗಾಗಿ ತಿಂಗಳ ಹಣಕ್ಕಾಗಿ ಕಾಯುವಂತಾಗಿದೆ.

ಮತ್ತೊಂದೆಡೆ, ಸಂಬಂಧಪಟ್ಟ ಇಲಾಖೆಯಿಂದ ಅನುದಾನ ಬಿಡುಗಡೆಗೆ ಮಂಜೂರಾತಿ ದೊರೆತಿದೆ ಎಂಬ ಮಾಹಿತಿ ಹರಿದಾಡುತ್ತಿದ್ದರೂ, ಫಲಾನುಭವಿಗಳ ಬ್ಯಾಂಕ್ ಖಾತೆಗಳಿಗೆ ಮಾತ್ರ ಹಣ ಜಮೆಯಾಗಿಲ್ಲ ಎನ್ನಲಾಗಿದೆ. ಅನುದಾನ ಮಂಜೂರಾಗಿದ್ದರೂ ಹಣ ವರ್ಗಾವಣೆಯಲ್ಲಿ ವಿಳಂಬವಾಗುತ್ತಿರುವುದಕ್ಕೆ ನಿಖರ ಕಾರಣವೇನು ಎಂಬುದು ಸ್ಪಷ್ಟವಾಗಿಲ್ಲ.

ಸರ್ಕಾರ ಮಹಿಳೆಯರ ಆರ್ಥಿಕ ಸಬಲೀಕರಣದ ಉದ್ದೇಶದಿಂದ ಜಾರಿಗೆ ತಂದಿರುವ ಯೋಜನೆಯ ಹಣ ಪ್ರತಿ ತಿಂಗಳು ನಿಗದಿತ ಸಮಯಕ್ಕೆ ತಲುಪುವಂತೆ ಕ್ರಮ ಕೈಗೊಳ್ಳಬೇಕು. ತಿಂಗಳುಗಟ್ಟಲೆ ಹಣ ಬಿಡುಗಡೆ ವಿಳಂಬವಾದರೆ ಯೋಜನೆಯನ್ನೇ ಅವಲಂಬಿಸಿರುವ ಬಡ ಕುಟುಂಬಗಳ ಆರ್ಥಿಕ ನಿರ್ವಹಣೆಗೆ ತೊಂದರೆಯಾಗುತ್ತದೆ. ಆದ್ದರಿಂದ ಬಾಕಿ ಇರುವ ತಿಂಗಳ ಹಣವನ್ನು ಕೂಡಲೇ ಫಲಾನುಭವಿಗಳ ಖಾತೆಗೆ ಜಮೆ ಮಾಡಬೇಕು ಹಾಗೂ ಮುಂದಿನ ದಿನಗಳಲ್ಲಿ ಪ್ರತಿ ತಿಂಗಳು ಸಕಾಲಕ್ಕೆ ಹಣ ಬಿಡುಗಡೆ ಮಾಡಬೇಕು ಎಂದು ಮಹಿಳಾ ಫಲಾನುಭವಿಗಳು ಒತ್ತಾಯಿಸಿದ್ದಾರೆ.

ಮಕ್ಕಳ ಪ್ರತಿಭೆಗೆ ಸೂಕ್ತ ವೇದಿಕೆ ಕಲ್ಪಿಸಿ

“ಮುಂಜಾನೆಯ ಮೆರಗು”

ಜಗಳೂರು ನ, 15– ಮಕ್ಕಳಲ್ಲಿರುವ ಸುಪ್ತ ಪ್ರತಿಭೆಯನ್ನು ಗುರುತಿಸಿ, ಅವರಿಗೆ ಸೂಕ್ತ ಪ್ರೋತ್ಸಾಹ ನೀಡುವ ಮೂಲಕ ಭವಿಷ್ಯದ ಉತ್ತಮ ನಾಗರಿಕರನ್ನಾಗಿ ರೂಪಿಸುವ ಜವಾಬ್ದಾರಿ ಶಿಕ್ಷಕರು ಹಾಗೂ ಪೋಷಕರ ಮೇಲಿದೆ ಎಂದು ಶಿಕ್ಷಕ ನಯಜ್ ಹೇಳಿದರು.



ತಾಲೂಕಿನ ದೊಡ್ಡಬೊಮ್ಮನಹಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆಯಲ್ಲಿ ಹಮ್ಮಿಕೊಳ್ಳಲಾಗಿದ್ದ ಮಕ್ಕಳ ದಿನಾಚರಣೆ ಕಾರ್ಯಕ್ರಮವನ್ನು ಉದ್ದೇಶಿಸಿ ಅವರು ಮಾತನಾಡಿದರು.

ಮಕ್ಕಳು ದೇಶದ ಅಮೂಲ್ಯ ಸಂಪತ್ತು. ಅವರಲ್ಲಿ ಓದಿನ ಆಸಕ್ತಿ, ಶಿಸ್ತು, ಸಮಯಪ್ರಜ್ಞೆ ಹಾಗೂ ಉತ್ತಮ ಸಂಸ್ಕಾರಗಳನ್ನು ಬೆಳೆಸಬೇಕು. ಪಠ್ಯಪುಸ್ತಕದ ಶಿಕ್ಷಣದ ಜೊತೆಗೆ ಕ್ರೀಡೆ, ಸಾಂಸ್ಕೃತಿಕ ಚಟುವಟಿಕೆ ಮತ್ತು ಸೃಜನಶೀಲ ಚಟುವಟಿಕೆಗಳಲ್ಲಿಯೂ ಮಕ್ಕಳು ತೊಡಗಿಸಿಕೊಳ್ಳಬೇಕು. ಪ್ರತಿಯೊಬ್ಬ ಮಗುವಿನಲ್ಲಿಯೂ ಒಂದೊಂದು ವಿಶೇಷ ಪ್ರತಿಭೆ ಇರುತ್ತದೆ. ಅದನ್ನು ಗುರುತಿಸಿ ಪ್ರೋತ್ಸಾಹಿಸಿದಾಗ ಮಾತ್ರ ಮಕ್ಕಳು ಜೀವನದಲ್ಲಿ ಉನ್ನತ ಸಾಧನೆ ಮಾಡಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಮಕ್ಕಳ ದಿನಾಚರಣೆಯು ಮಕ್ಕಳ ಹಕ್ಕುಗಳು, ಅವರ ಶಿಕ್ಷಣ ಹಾಗೂ ಸರ್ವತೋಮುಖ ಬೆಳವಣಿಗೆಯ ಮಹತ್ವವನ್ನು ಸಾರುವ ದಿನವಾಗಿದೆ. ಮಕ್ಕಳಿಗೆ ಉತ್ತಮ ಶಿಕ್ಷಣ ಮತ್ತು ಪ್ರೀತಿಯ ವಾತಾವರಣ ಕಲ್ಪಿಸುವುದು ಎಲ್ಲರ ಕರ್ತವ್ಯವಾಗಿದೆ ಎಂದರು.

ಈ ಸಂದರ್ಭದಲ್ಲಿ ಶಾಲೆಯ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಿ, ಮೌಢ್ಯತೆಯಿಂದ ಹೊರಬನ್ನಿ: ಶ್ರೀ ಕೃಷ್ಣ ಯಾದವಾನಂದ ಸ್ವಾಮೀಜಿ

“ಮುಂಜಾನೆಯ ಮೆರಗು”

ಜಗಳೂರು ನ, 15– ಸಮಾಜದ ಪ್ರತಿಯೊಬ್ಬರೂ ತಮ್ಮ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುವುದರ ಜೊತೆಗೆ ಮೌಢ್ಯತೆ ಹಾಗೂ ಅನಿಷ್ಟ ಪದ್ಧತಿಗಳಿಂದ ಹೊರಬಂದು ವೈಚಾರಿಕ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಚಿತ್ರದುರ್ಗದ ಯಾದವ ಸಂಸ್ಥಾನದ ಜಗದ್ಗುರು ಶ್ರೀ ಕೃಷ್ಣ ಯಾದವಾನಂದ ಸ್ವಾಮೀಜಿ ಹೇಳಿದರು.

ಪಟ್ಟಣದ ಶಾಸಕ ಬಿ. ದೇವೇಂದ್ರಪ್ಪ ಅವರ ನಿವಾಸಕ್ಕೆ ಕಾರ್ಯನಿಮಿತ್ತ ಭೇಟಿ ನೀಡಿದ ಸಂದರ್ಭದಲ್ಲಿ ಯಾದವ ಸಮುದಾಯದ ಮುಖಂಡರನ್ನು ಉದ್ದೇಶಿಸಿ ಅವರು ಮಾತನಾಡಿದರು.

ಸಮಾಜದ ಅಭಿವೃದ್ಧಿಗೆ ಶಿಕ್ಷಣವೇ ಪ್ರಮುಖ ಅಡಿಪಾಯವಾಗಿದೆ. ಆದ್ದರಿಂದ ಪ್ರತಿಯೊಬ್ಬ ಪೋಷಕರೂ ತಮ್ಮ ಮಕ್ಕಳ ಭವಿಷ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಿ ಉತ್ತಮ ಶಿಕ್ಷಣ ಕೊಡಿಸಬೇಕು. ಕೇವಲ ಶಿಕ್ಷಣ ಪಡೆಯುವುದಷ್ಟೇ ಅಲ್ಲದೆ, ಮಕ್ಕಳಲ್ಲಿ ಸಂಸ್ಕಾರ, ಶಿಸ್ತು, ಸಾಮಾಜಿಕ ಜವಾಬ್ದಾರಿ ಹಾಗೂ ಪರಸ್ಪರ ಗೌರವಿಸುವ ಗುಣಗಳನ್ನು ಬೆಳೆಸಬೇಕು. ಸಮಾಜದಲ್ಲಿ ಬೇರೂರಿರುವ ಮೌಢ್ಯತೆ ಮತ್ತು ಅನಿಷ್ಟ ಪದ್ಧತಿಗಳನ್ನು ತೊಡೆದುಹಾಕಿ ವೈಜ್ಞಾನಿಕ ಚಿಂತನೆಗೆ ಆದ್ಯತೆ ನೀಡಬೇಕು ಎಂದು ಸಲಹೆ ನೀಡಿದರು.

ಸಮುದಾಯದ ಮುಖಂಡರು ಪರಸ್ಪರ ಸಹಕಾರ ಮತ್ತು ಒಗ್ಗಟ್ಟಿನ ಮನೋಭಾವದಿಂದ ಕಾರ್ಯನಿರ್ವಹಿಸಬೇಕು. ಸಮಾಜದ ಪ್ರತಿಯೊಬ್ಬರ ಸಂಕಷ್ಟಗಳಿಗೆ ಸ್ಪಂದಿಸುವ ಮೂಲಕ ಸಮುದಾಯದ ಏಳಿಗೆಗೆ ಶ್ರಮಿಸಬೇಕು. ಸಂಘಟನಾತ್ಮಕವಾಗಿ ಮುನ್ನಡೆದಾಗ ಮಾತ್ರ ಸಮಾಜದ ಅಭಿವೃದ್ಧಿ ಸಾಧ್ಯವಾಗುತ್ತದೆ. ಶಾಸಕ ಬಿ. ದೇವೇಂದ್ರಪ್ಪ ಅವರು ಉತ್ತಮ ರೀತಿಯಲ್ಲಿ

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಬೂತ್ ಮಟ್ಟದಿಂದ ಕಾಂಗ್ರೆಸ್ ಸಂಘಟನೆ ಬಲವರ್ಧನೆಗೆ ಚರ್ಚೆ: ಯು.ಟಿ. ಖಾದರ್

"ಮುಂಜಾನೆಯ ಮೆರಗು"

ಮಂಗಳೂರು ನ, 15– ಮುಂಬರುವ ದಿನಗಳಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ಕಾಂಗ್ರೆಸ್ ಪಕ್ಷವನ್ನು ಬೂತ್ ಮಟ್ಟದಿಂದಲೇ ಮತ್ತಷ್ಟು ಬಲಪಡಿಸುವುದು ಹಾಗೂ ಕಾರ್ಯಕರ್ತರನ್ನು ಸಕ್ರಿಯವಾಗಿ ಪಕ್ಷದ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವ ಕುರಿತು ಮಂಗಳೂರಿನ ಕಾಂಗ್ರೆಸ್ ಕಚೇರಿಯಲ್ಲಿ ನಡೆದ ಸಭೆಯಲ್ಲಿ ಸುದೀರ್ಘ ಚರ್ಚೆ ನಡೆಸಲಾಯಿತು ಎಂದು ಸಚಿವ ಯು.ಟಿ. ಖಾದರ್ ತಿಳಿಸಿದರು.

ಮಂಗಳೂರಿನ ಕಾಂಗ್ರೆಸ್ ಕಚೇರಿಗೆ ಭೇಟಿ ನೀಡಿದ ಸಚಿವರು, ಪಕ್ಷದ ಮುಖಂಡರೊಂದಿಗೆ ಸಭೆ ನಡೆಸಿ ಸಂಘಟನೆಯ ಪ್ರಸ್ತುತ ಸ್ಥಿತಿ ಹಾಗೂ ಮುಂದಿನ ದಿನಗಳಲ್ಲಿ ಕೈಗೊಳ್ಳಬೇಕಾದ ಕಾರ್ಯತಂತ್ರಗಳ ಕುರಿತು ಸಮಾಲೋಚನೆ ನಡೆಸಿದರು. ಇದೇ ಸಂದರ್ಭದಲ್ಲಿ ಪಕ್ಷದ



ಕಾರ್ಯಕರ್ತರನ್ನು ಭೇಟಿ ಮಾಡಿ ಅವರ ಅಭಿಪ್ರಾಯ, ಸಲಹೆಗಳನ್ನು ಆಲಿಸಿದರು.

ಜಿಲ್ಲೆಯಾದ್ಯಂತ ಪಕ್ಷದ ಸಂಘಟನೆಯನ್ನು ತಳಮಟ್ಟದಿಂದ ಬಲಪಡಿಸುವುದು, ಬೂತ್‌ಗಳಲ್ಲಿ ಕಾರ್ಯಕರ್ತರ ಪಾಲ್ಗೊಳ್ಳುವಿಕೆಯನ್ನು ಹೆಚ್ಚಿಸುವುದು ಹಾಗೂ ಪಕ್ಷದ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ನಡೆಸುವ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

ಸರ್ಕಾರದ ಜನಪರ ಯೋಜನೆಗಳು ಮತ್ತು ಕಾರ್ಯಕ್ರಮಗಳ ಮಾಹಿತಿ ಪ್ರತಿಯೊಂದು ಮನೆಗೂ ತಲುಪಿಸುವಲ್ಲಿ ಪಕ್ಷದ ಕಾರ್ಯಕರ್ತರ ಪಾತ್ರ ಮಹತ್ವದ್ದಾಗಿದೆ. ಈ ನಿಟ್ಟಿನಲ್ಲಿ ಕಾರ್ಯಕರ್ತರು ಜನರೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ಸರ್ಕಾರದ ಯೋಜನೆಗಳ ಪ್ರಯೋಜನ ಅರ್ಹ ಫಲಾನುಭವಿಗಳಿಗೆ ತಲುಪುವಂತೆ ಕಾರ್ಯನಿರ್ವಹಿಸಬೇಕು ಎಂದು ಅಭಿಪ್ರಾಯ ವ್ಯಕ್ತಪಡಿಸಲಾಯಿತು.

ಸಭೆಯಲ್ಲಿ ಮಾಜಿ ಸಚಿವರು ಹಾಗೂ ಹಿರಿಯ ನಾಯಕರಾದ ಬಿ. ರಮಾನಾಥ ರೈ, ಮಂಗಳೂರು ಕಾಂಗ್ರೆಸ್ ಅಧ್ಯಕ್ಷ ಪದ್ಮರಾಜ್ ರಾಮಯ್ಯ, ಪಕ್ಷದ ಮುಖಂಡರಾದ ಮಿಥುನ್ ರೈ, ರಕ್ಷಿತ್ ಶಿವರಾಮ್, ಇನಾಯತ್ ಅಲಿ ಸೇರಿದಂತೆ ಹಲವು ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

300 ಗಂಟೆಗಳ ನಿರಂತರ ಗಾಯನದ ವಿಶ್ವ ದಾಖಲೆ ಪ್ರಯತ್ನಕ್ಕೆ ಬಿ.ಕೆ. ಹರಿಪ್ರಸಾದ್ ಮೆಚ್ಚುಗೆ

"ಮುಂಜಾನೆಯ ಮೆರಗು"

ಮಂಗಳೂರು ನ, 15– ಕೊಂಕಣಿ ಭಾಷೆ, ಸಂಗೀತ ಹಾಗೂ ಕರಾವಳಿಯ ಸಾಂಸ್ಕೃತಿಕ ಶ್ರೀಮಂತಿಕೆಯನ್ನು ಜಾಗತಿಕ ಮಟ್ಟದಲ್ಲಿ ಪರಿಚಯಿಸುವ ಉದ್ದೇಶದಿಂದ ಮಂಗಳೂರಿನಲ್ಲಿ ಆಯೋಜಿಸಿರುವ ಪ್ರಥಮ ವಿಶ್ವ ಕೊಂಕಣಿ ಸಂಗೀತ ಮಹಾಸಮ್ಮೇಳನದ ಪ್ರಯತ್ನ ಶ್ಲಾಘನೀಯ ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಹೇಳಿದರು.



ನಗರದ ಕುದ್ಮುಲ್ ರಂಗರಾವ್ ಪುರಭವನದಲ್ಲಿ ಪ್ರಸಿದ್ಧ ಕೊಂಕಣಿ ಸಾಂಸ್ಕೃತಿಕ ಸಂಘಟನೆ 'ಮಾಂಡ್ ಸೊಭಾಣ್' ವತಿಯಿಂದ ಆಯೋಜಿಸಿರುವ ಮಹಾಸಮ್ಮೇಳನಕ್ಕೆ ಭೇಟಿ ನೀಡಿದ ಅವರು, ಆಯೋಜಕರು ಹಾಗೂ ಕಲಾವಿದರಿಗೆ ಶುಭ ಹಾರೈಸಿದರು.

ಗಿನ್ನೆಸ್ ವಿಶ್ವ ದಾಖಲೆ ನಿರ್ಮಿಸುವ ಉದ್ದೇಶದಿಂದ 300 ಗಂಟೆಗಳ ನಿರಂತರ ಗಾಯನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ದೇಶ–ವಿದೇಶಗಳ 6,700ಕ್ಕೂ ಅಧಿಕ ಗಾಯಕರು ಹಾಗೂ 300ಕ್ಕೂ ಹೆಚ್ಚು ತಂಡಗಳು ಭಾಗವಹಿಸುತ್ತಿರುವುದು ವಿಶೇಷವಾಗಿದೆ ಎಂದರು.

ಭಾಷೆ, ಕಲೆ ಮತ್ತು ಸಂಗೀತದ ಮೂಲಕ ಸಾಂಸ್ಕೃತಿಕ ಸಾಮರಸ್ಯವನ್ನು ಸಾರುತ್ತಿರುವ 'ಮಾಂಡ್ ಸೊಭಾಣ್' ಸಂಸ್ಥೆಯ 40ನೇ ವರ್ಷದ ಸಂದರ್ಭದಲ್ಲಿ ಇಂತಹ ಬೃಹತ್ ಕಾರ್ಯಕ್ರಮ ಆಯೋಜಿಸಿರುವುದು ಅಭಿನಂದನೀಯ. ಈ ಪ್ರಯತ್ನ ಕೊಂಕಣಿ ಭಾಷೆ ಮತ್ತು ಸಂಗೀತ ಪರಂಪರೆಯನ್ನು ವಿಶ್ವಮಟ್ಟಕ್ಕೆ ಕೊಂಡೊಯ್ಯಲು ನೆರವಾಗಲಿದೆ ಎಂದು ಅಭಿಪ್ರಾಯಪಟ್ಟರು.

ಕರಾವಳಿಯ ಸಾಂಸ್ಕೃತಿಕ ವೈವಿಧ್ಯತೆ ಹಾಗೂ ಕೊಂಕಣಿ ಭಾಷೆಯ ಶ್ರೀಮಂತಿಕೆಯನ್ನು ಜಾಗತಿಕ ಮಟ್ಟದಲ್ಲಿ ಪರಿಚಯಿಸುವ ಈ ಮಹಾಸಮ್ಮೇಳನ ಯಶಸ್ವಿಯಾಗಲಿ ಎಂದು ಅವರು ಹಾರೈಸಿದರು.

ಕಲಬುರಗಿಯಲ್ಲಿ ಕ್ರೀಡಾ ಕ್ರಾಂತಿಗೆ ಬುನಾದಿ: ಪ್ರತಿ ವರ್ಷ ಒಂದು ತಿಂಗಳು ಕ್ರೀಡಾ ಹಬ್ಬ ಆಯೋಜನೆಗೆ ಚಿಂತನೆ: ಸಚಿವ ಪ್ರಿಯಾಂಕ್ ಖರ್ಗೆ

"ಮುಂಜಾನೆಯ ಮೆರಗು"

ಕಲಬುರಗಿ ನ, 15– ಜಿಲ್ಲೆಯಲ್ಲಿ ಕ್ರೀಡಾ ಪ್ರತಿಭೆಗಳಿಗೆ ಸೂಕ್ತ ವೇದಿಕೆ ಕಲ್ಪಿಸುವ ಉದ್ದೇಶದಿಂದ ಕರ್ನಾಟಕದಲ್ಲಿಯೇ ಮೊದಲ ಬಾರಿಗೆ ಆಯೋಜಿಸಲಾಗಿದ್ದ 'ಕಲಬುರಗಿ ಸ್ಪೋರ್ಟ್ಸ್ ಹಬ್ಬ' ಯಶಸ್ವಿಯಾಗಿ ಮುಕ್ತಾಯಗೊಂಡಿದೆ. ಈ ಕ್ರೀಡಾ ಹಬ್ಬದ ಮೂಲಕ ಕಲಬುರಗಿಯಲ್ಲಿ ಕ್ರೀಡಾ ಕ್ರಾಂತಿಗೆ ಬುನಾದಿ ಹಾಕಲಾಗಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದರು.

ಕ್ರೀಡಾ ಹಬ್ಬದ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, ಕಲಬುರಗಿ ಜಿಲ್ಲೆಯಲ್ಲಿ ಕ್ರೀಡಾ ಪ್ರತಿಭೆಗಳಿಗೆ ಕೊರತೆಯಿಲ್ಲ. ಆದರೆ ತಮ್ಮ ಸಾಮರ್ಥ್ಯ ಪ್ರದರ್ಶಿಸಲು ಸೂಕ್ತ ಅವಕಾಶಗಳು ಮತ್ತು ವೇದಿಕೆಗಳ ಕೊರತೆಯಿತ್ತು. ಇದೀಗ ಕ್ರೀಡಾಪಟುಗಳಿಗೆ ಅವಕಾಶ ಕಲ್ಪಿಸುವ ಮೂಲಕ ಅವರ ಪ್ರತಿಭೆ ಗುರುತಿಸಲು ಹಾಗೂ ಪ್ರೋತ್ಸಾಹಿಸಲು ಪ್ರಯತ್ನಿಸಲಾಗಿದೆ ಎಂದರು.

ಈ ಕ್ರೀಡಾ ಹಬ್ಬದಲ್ಲಿ ಭಾಗವಹಿಸಿದ ಕ್ರೀಡಾಪಟುಗಳು ಪ್ರಶಸ್ತಿಗಳನ್ನು



ಜಿಲ್ಲಾಡಳಿತ ಬೆಂಬಲ ನೀಡಲಿವೆ ಎಂದು ತಿಳಿಸಿದರು.

ಪ್ರತಿ ವರ್ಷ ಒಂದು ತಿಂಗಳನ್ನು ಕ್ರೀಡಾ ಹಬ್ಬಕ್ಕೆ ಮೀಸಲಿಡುವ ಕುರಿತು ಚಿಂತನೆ ನಡೆಸಲಾಗುತ್ತಿದೆ. ಇದರಿಂದ ಕ್ರೀಡಾಪಟುಗಳಿಗೆ ನಿರಂತರ ತರಬೇತಿ ಪಡೆಯಲು ಹಾಗೂ ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಲು ಅನುಕೂಲವಾಗಲಿದೆ. ಕ್ರೀಡಾಪಟುಗಳ ಭವಿಷ್ಯ ರೂಪಿಸುವ ನಿಟ್ಟಿನಲ್ಲಿ ಅಗತ್ಯ ಸಹಕಾರ ನೀಡಲಾಗುವುದು ಎಂದರು.

ಜಿಲ್ಲೆಯ ಕ್ರೀಡಾ ಮೂಲಸೌಕರ್ಯ ಅಭಿವೃದ್ಧಿಗೂ ಆದ್ಯತೆ ನೀಡಲಾಗುತ್ತಿದೆ. ಸುಮಾರು 50 ಕೋಟಿ ರೂ. ವೆಚ್ಚದಲ್ಲಿ ಜಿಲ್ಲಾ ಕ್ರೀಡಾಂಗಣದ ನವೀಕರಣ ಕಾರ್ಯ ನಡೆಯುತ್ತಿದ್ದು, ವಿವಿಧ ಕಡೆಗಳಲ್ಲಿ ಸಮುದಾಯ ಕ್ರೀಡಾಂಗಣಗಳನ್ನು ನಿರ್ಮಿಸಲಾಗಿದೆ. ಚಿತ್ತಾಪುರದಲ್ಲಿಯೂ ನೂತನ ಕ್ರೀಡಾಂಗಣ ನಿರ್ಮಿಸಲಾಗಿದೆ ಎಂದು ಸಚಿವರು ವಿವರಿಸಿದರು.

ಕ್ರೀಡಾ ಪ್ರತಿಭೆಗಳನ್ನು ಗುರುತಿಸಿ ಸೂಕ್ತ ತರಬೇತಿ, ಮೂಲಸೌಕರ್ಯ ಹಾಗೂ ನಿರಂತರ ಅವಕಾಶಗಳನ್ನು ಒದಗಿಸುವ ಮೂಲಕ ಕಲಬುರಗಿಯನ್ನು ಕ್ರೀಡಾ ಕ್ಷೇತ್ರದಲ್ಲಿ ಗುರುತಿಸಿಕೊಳ್ಳುವಂತೆ ಮಾಡುವ ಉದ್ದೇಶವನ್ನು ಈ ಕ್ರೀಡಾ ಹಬ್ಬ ಹೊಂದಿದೆ.

ಬಿರ್ಸಾ ಮುಂಡಾ ಅವರ 151ನೇ ಜನ್ಮ ವಾರ್ಷಿಕೋತ್ಸವ: ತುಮಕೂರಿನಲ್ಲಿ ಜನಜಾತಿಯ ಗೌರವ್ ದಿವಸ್ ಆಚರಣೆ

"ಮುಂಜಾನೆಯ ಮೆರಗು"

ತುಮಕೂರು, ನ.15– ಸ್ವಾತಂತ್ರ್ಯ ಹೋರಾಟಗಾರ ಹಾಗೂ ಆದಿವಾಸಿ ಸಮುದಾಯಗಳ ಹಕ್ಕುಗಳಿಗಾಗಿ ಹೋರಾಡಿದ ಭಗವಾನ್ ಶ್ರೀ ಬಿರ್ಸಾ ಮುಂಡಾ ಅವರ 151ನೇ ಜನ್ಮ ವಾರ್ಷಿಕೋತ್ಸವದ ಅಂಗವಾಗಿ ತುಮಕೂರಿನಲ್ಲಿ ಜನಜಾತಿಯ ಗೌರವ್ ದಿವಸ್ ಕಾರ್ಯಕ್ರಮವನ್ನು ಆಚರಿಸಲಾಯಿತು.



ಜಿಲ್ಲಾಡಳಿತ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಜಿಲ್ಲಾಧಿಕಾರಿಗಳ ಕಚೇರಿಯ ನ್ಯಾಯಾಂಗ ಸಭಾಂಗಣದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾಧಿಕಾರಿ ಶುಭಾ ಕಲ್ಯಾಣ್ ಅವರು ವಹಿಸಿದ್ದರು.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಶುಭಾ ಕಲ್ಯಾಣ್ ಹಾಗೂ ಅಪರ ಜಿಲ್ಲಾಧಿಕಾರಿ ಡಾ. ಎನ್. ತಿಪ್ಪೇಸ್ವಾಮಿ ಅವರು ಭಗವಾನ್ ಶ್ರೀ ಬಿರ್ಸಾ ಮುಂಡಾ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಗೌರವ ನಮನ ಸಲ್ಲಿಸಿದರು.

ಬ್ರಿಟಿಷರ ಆಡಳಿತದ ವಿರುದ್ಧ ಹೋರಾಡಿ ಆದಿವಾಸಿ ಸಮುದಾಯಗಳ ಹಕ್ಕು, ಸ್ವಾಭಿಮಾನ ಹಾಗೂ ಅಸ್ಮಿತೆಯ ರಕ್ಷಣೆಗಾಗಿ ಶ್ರಮಿಸಿದ ಬಿರ್ಸಾ ಮುಂಡಾ ಅವರ ಜೀವನ ಮತ್ತು ಹೋರಾಟವನ್ನು ಸ್ಮರಿಸುವ ಉದ್ದೇಶದಿಂದ ಜನಜಾತಿಯ ಗೌರವ್ ದಿವಸ್ ಆಚರಿಸಲಾಗುತ್ತದೆ.

ಈ ಸಂದರ್ಭದಲ್ಲಿ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿಗಳು ಹಾಗೂ ಜಿಲ್ಲಾಡಳಿತದ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ರೈತರು, ಮಹಿಳೆಯರು, ಕುಶಲಕರ್ಮಿಗಳ ಆರ್ಥಿಕ ಸಬಲೀಕರಣಕ್ಕೆ ಸಹಕಾರ ಸಂಸ್ಥೆಗಳು ಬೆನ್ನೆಲುಬು: ಸಚಿವ ಟಿ. ರಘುಮೂರ್ತಿ

"ಮುಂಜಾನೆಯ ಮೆರಗು"

ಚಿತ್ರದುರ್ಗ ನ, 15– ರೈತರು, ಮಹಿಳೆಯರು, ಕುಶಲಕರ್ಮಿಗಳು ಹಾಗೂ ಸಮಾಜದ ದುರ್ಬಲ ವರ್ಗದವರ ಆರ್ಥಿಕ ಸಬಲೀಕರಣದಲ್ಲಿ ಸಹಕಾರ ಸಂಸ್ಥೆಗಳು ಪ್ರಮುಖ ಪಾತ್ರ ವಹಿಸುತ್ತಿದ್ದು, ಗ್ರಾಮೀಣ ಭಾಗದ ಸುಸ್ಥಿರ ಅಭಿವೃದ್ಧಿಗೆ ಅವು ಬೆನ್ನೆಲುಬಾಗಿ ನಿಂತಿವೆ ಎಂದು ಸಚಿವ ಟಿ. ರಘುಮೂರ್ತಿ ತಿಳಿಸಿದರು.

ನಗರದ ಜೆಎಂ ಕಂಫರ್ಟ್ಸ್ ಸಭಾಂಗಣದಲ್ಲಿ ನಡೆದ 73ನೇ ಅಖಿಲ ಭಾರತ ಸಹಕಾರ ಸಪ್ತಾಹ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

'ಸುಸ್ಥಿರ ಅಭಿವೃದ್ಧಿ ಮತ್ತು ಬೆಳವಣಿಗೆಯಲ್ಲಿ ಸಹಕಾರ ಸಂಸ್ಥೆಗಳ ಪಾತ್ರ' ಎಂಬ ಧ್ಯೇಯವಾಕ್ಯದೊಂದಿಗೆ ಸಹಕಾರ ಸಪ್ತಾಹ ಆಚರಿಸುತ್ತಿರುವುದು ಅರ್ಥಪೂರ್ಣ ಹಾಗೂ ಸಮಯೋಚಿತವಾಗಿದೆ. ಕೃಷಿ ಸಾಲ ವಿತರಣೆ, ಶೂನ್ಯ ಬಡ್ಡಿದರದ ಸಾಲ ಯೋಜನೆಗಳು, ಹೈನುಗಾರಿಕೆ, ಮಾರುಕಟ್ಟೆ ಸೌಲಭ್ಯ ಹಾಗೂ ಸ್ವಸಹಾಯ ಸಂಘಗಳ ಬಲವರ್ಧನೆಯ ಮೂಲಕ ಸಹಕಾರ



ಸಂಘಗಳು ಗ್ರಾಮೀಣ ಆರ್ಥಿಕ ವ್ಯವಸ್ಥೆಗೆ ಮಹತ್ವದ ಕೊಡುಗೆ ನೀಡುತ್ತಿವೆ ಎಂದು ಹೇಳಿದರು.

ಸಾವಯವ ಕೃಷಿ, ಜಲ ಸಂರಕ್ಷಣೆ ಮತ್ತು ನವೀಕರಿಸಬಹುದಾದ ಇಂಧನ ಬಳಕೆಯಂತಹ ಪರಿಸರ ಸ್ನೇಹಿ ಚಟುವಟಿಕೆಗಳಿಗೆ ಸಹಕಾರ ಸಂಸ್ಥೆಗಳು ಉತ್ತೇಜನ ನೀಡುವ ಮೂಲಕ ಸುಸ್ಥಿರ ಅಭಿವೃದ್ಧಿಯ ಗುರಿ ಸಾಧನೆಗೆ ನೆರವಾಗಬೇಕು. ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಆರ್ಥಿಕ ಸ್ವಾವಲಂಬನೆ ದೊರಕಿಸುವುದು ಸಹಕಾರ ಚಳವಳಿಯ ಪ್ರಮುಖ ಉದ್ದೇಶವಾಗಿದೆ ಎಂದು ತಿಳಿಸಿದರು.

ಪರಿಶಿಷ್ಟ ಪಂಗಡದ ರೈತರು, ಅರಣ್ಯ ಉತ್ಪನ್ನ ಸಂಗ್ರಹಕಾರರು ಹಾಗೂ ಸಣ್ಣ ಉದ್ಯಮಿಗಳಿಗೆ ಸಹಕಾರ ಸಂಸ್ಥೆಗಳ ಮೂಲಕ ಹೆಚ್ಚಿನ ನೆರವು ಮತ್ತು ಮಾರುಕಟ್ಟೆ ಅವಕಾಶಗಳನ್ನು ಕಲ್ಪಿಸುವುದು ಸರ್ಕಾರದ ಆದ್ಯತೆಯಾಗಿದೆ. ಸಹಕಾರ ಸಂಘಗಳು ಕಾಲಕ್ಕೆ ತಕ್ಕಂತೆ ಡಿಜಿಟಲೀಕರಣ, ಆನ್‌ಲೈನ್ ಬ್ಯಾಂಕಿಂಗ್ ಹಾಗೂ ಪಾರದರ್ಶಕ ಆಡಳಿತ ವ್ಯವಸ್ಥೆಯನ್ನು ಅಳವಡಿಸಿಕೊಳ್ಳಬೇಕು. ಸದಸ್ಯರಲ್ಲಿ ಆರ್ಥಿಕ ಸಾಕ್ಷರತೆ ಹೆಚ್ಚಿಸುವುದರ ಜೊತೆಗೆ ಉತ್ತಮ ಆಡಳಿತದ ಮೂಲಕ ಸಾರ್ವಜನಿಕರ ವಿಶ್ವಾಸವನ್ನು ಬಲಪಡಿಸಬೇಕು ಎಂದು ಸಲಹೆ ನೀಡಿದರು.

ಯುವಜನರು ಹಾಗೂ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಸಹಕಾರ ಚಳವಳಿಯಲ್ಲಿ ಪಾಲ್ಗೊಂಡು ನಾಯಕತ್ವದ ಜವಾಬ್ದಾರಿ ವಹಿಸಿಕೊಳ್ಳುವಂತೆ ಪ್ರೋತ್ಸಾಹಿಸಬೇಕು. ಸರ್ಕಾರದ ಜನಪರ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸುವಲ್ಲಿ ಸಹಕಾರ ಸಂಸ್ಥೆಗಳು ಸೇತುವೆಯಾಗಿ ಕಾರ್ಯನಿರ್ವಹಿಸಬೇಕು. ಸಹಕಾರ ಕ್ಷೇತ್ರದ ಬೆಳವಣಿಗೆಗೆ ಸರ್ಕಾರ ಎಲ್ಲ ರೀತಿಯ ಸಹಕಾರ ನೀಡಲು ಬದ್ಧವಾಗಿದೆ ಎಂದು ಸಚಿವರು ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ಸಹಕಾರ ಕ್ಷೇತ್ರದ ಗಣ್ಯರು, ಜನಪ್ರತಿನಿಧಿಗಳು, ಅಧಿಕಾರಿಗಳು ಹಾಗೂ ವಿವಿಧ ಸಹಕಾರ ಸಂಘಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಕಿದ್ವಾಯಿ ಆಸ್ಪತ್ರೆಯಲ್ಲಿ ಪುಟಾಣಿ ಮಕ್ಕಳೊಂದಿಗೆ ಮಕ್ಕಳ ದಿನಾಚರಣೆ

"ಮುಂಜಾನೆಯ ಮೆರಗು"

ಬೆಂಗಳೂರು ನ, 15– ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ನಗರದ ಕಿದ್ವಾಯಿ ಸ್ಮಾರಕ ಗ್ರಂಥಿ ಸಂಸ್ಥೆಗೆ ಭೇಟಿ ನೀಡಿ, ಅಲ್ಲಿ ಚಿಕಿತ್ಸೆ ಪಡೆಯುತ್ತಿರುವ ಮಕ್ಕಳೊಂದಿಗೆ ಆತ್ಮೀಯವಾಗಿ ಸಮಯ ಕಳೆದು ಮಕ್ಕಳ ದಿನಾಚರಣೆಯ ಶುಭಾಶಯಗಳನ್ನು ತಿಳಿಸಿದರು.



ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಪುಟಾಣಿ ಮಕ್ಕಳನ್ನು ಭೇಟಿಯಾದ ಮುಖ್ಯಮಂತ್ರಿ ಅವರು, ಮಕ್ಕಳಿಗೆ ಗುಲಾಬಿ ಹೂಗಳನ್ನು ನೀಡಿ ಶುಭ ಹಾರೈಸಿದರು. ಈ ಸಂದರ್ಭದಲ್ಲಿ ಮಕ್ಕಳ ಆರೋಗ್ಯ, ಚಿಕಿತ್ಸೆ ಹಾಗೂ ಆಸ್ಪತ್ರೆಯಲ್ಲಿ ಅವರಿಗೆ ದೊರೆಯುತ್ತಿರುವ ಸೌಲಭ್ಯಗಳ ಕುರಿತು ಮಾಹಿತಿ ಪಡೆದರು.

ಕ್ಯಾನ್ಸರ್‌ನಂತಹ ಗಂಭೀರ ಕಾಯಿಲೆಗಳ ನಡುವೆಯೂ ಧೈರ್ಯದಿಂದ ಹೋರಾಡುತ್ತಿರುವ ಮಕ್ಕಳ ಆತ್ಮವಿಶ್ವಾಸ ಮತ್ತು ಬದುಕಿನ ಬಗೆಗಿನ ಭರವಸೆ ಎಲ್ಲರಿಗೂ ಸ್ಫೂರ್ತಿದಾಯಕವಾಗಿದೆ. ಮಕ್ಕಳೊಂದಿಗೆ ಸಂವಾದ ನಡೆಸಿದ ಅವರು, ಪೋಷಕರು ಹಾಗೂ ವೈದ್ಯರೊಂದಿಗೂ ಮಾತುಕತೆ ನಡೆಸಿ ಆತ್ಮೀಯತೆ ವ್ಯಕ್ತಪಡಿಸಿದರು.

ಬದುಕಿನ ಕಠಿಣ ಸವಾಲುಗಳ ನಡುವೆಯೂ ನಗು ಮತ್ತು ಭರವಸೆಯನ್ನು ಕಳೆದುಕೊಳ್ಳದೆ ಹೋರಾಡುತ್ತಿರುವ ಮಕ್ಕಳ ಧೈರ್ಯ ಮೆಚ್ಚುವಂತಹದ್ದು. ಪ್ರತಿಯೊಂದು ಮಗುವಿನ ಭವಿಷ್ಯವೂ ಅಮೂಲ್ಯವಾಗಿದ್ದು, ಅವರ ಆರೋಗ್ಯ, ಶಿಕ್ಷಣ ಹಾಗೂ ಸಂತೋಷದ ಬದುಕಿಗೆ ಸಮಾಜ ಬೆಂಬಲವಾಗಿ ನಿಲ್ಲಬೇಕು ಎಂಬ ಆಶಯವನ್ನು ಈ ಸಂದರ್ಭದಲ್ಲಿ ವ್ಯಕ್ತಪಡಿಸಿದರು.

ಮಕ್ಕಳ ದಿನಾಚರಣೆಯ ಅಂಗವಾಗಿ ಮುಖ್ಯಮಂತ್ರಿಗಳ ಭೇಟಿ ಆಸ್ಪತ್ರೆಯ ಪುಟಾಣಿ ರೋಗಿಗಳಲ್ಲಿ ಸಂತಸ ಮೂಡಿಸಿತು.

ಸಹಕಾರ ಕ್ಷೇತ್ರದ ಅಭಿವೃದ್ಧಿಗೆ ಸಂಘಟಿತ ಪ್ರಯತ್ನ ಅಗತ್ಯ: 73ನೇ ಸಹಕಾರ ಸಪ್ತಾಹಕ್ಕೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಚಾಲನೆ

"ಮುಂಜಾನೆಯ ಮೆರಗು"

ಬೆಂಗಳೂರು ನ, 15– ಸಹಕಾರ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿದ ಸಾಧಕರನ್ನು ಗುರುತಿಸಿ ಗೌರವಿಸುವ ಹಾಗೂ ಸಹಕಾರ ಚಳವಳಿಯ ಮಹತ್ವವನ್ನು ಜನರಿಗೆ ತಿಳಿಸುವ ಉದ್ದೇಶದಿಂದ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ವತಿಯಿಂದ ಆಯೋಜಿಸಿದ್ದ 73ನೇ ಸಹಕಾರ ಸಪ್ತಾಹ–2026ರ ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಚಾಲನೆ ನೀಡಿದರು.

ನಗರದಲ್ಲಿ ನಡೆದ ಕಾರ್ಯಕ್ರಮವನ್ನು ಉದ್ಘಾಟಿಸಿದ ಮುಖ್ಯಮಂತ್ರಿ ಅವರು, ಸಹಕಾರ ಕ್ಷೇತ್ರದಲ್ಲಿ ಮಹತ್ವದ ಸೇವೆ ಸಲ್ಲಿಸಿರುವ ಗಣ್ಯರಿಗೆ 'ಸಹಕಾರ ರತ್ನ' ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಿದರು. ಸಹಕಾರ ಸಂಸ್ಥೆಗಳ ಮೂಲಕ ಸಮಾಜದ ವಿವಿಧ ವರ್ಗಗಳ ಆರ್ಥಿಕ ಮತ್ತು ಸಾಮಾಜಿಕ ಪ್ರಗತಿಗೆ ಕೊಡುಗೆ ನೀಡುತ್ತಿರುವ ಸಾಧಕರ ಸೇವೆಯನ್ನು ಈ ಸಂದರ್ಭದಲ್ಲಿ ಸ್ಮರಿಸಲಾಯಿತು.

ಸಹಕಾರ ಚಳವಳಿಯು ಗ್ರಾಮೀಣಾಭಿವೃದ್ಧಿ, ಕೃಷಿ, ಹೈನುಗಾರಿಕೆ, ಬ್ಯಾಂಕಿಂಗ್, ವಸತಿ ಸೇರಿದಂತೆ ಹಲವು





ಕ್ಷೇತ್ರಗಳಲ್ಲಿ ಮಹತ್ವದ ಪಾತ್ರ ವಹಿಸುತ್ತಿದೆ. ಸಾಮಾನ್ಯ ಜನರು ಸಂಘಟಿತರಾಗಿ ಆರ್ಥಿಕ ಚಟುವಟಿಕೆಗಳಲ್ಲಿ ಪಾಲ್ಗೊಳ್ಳಲು ಸಹಕಾರ ಸಂಸ್ಥೆಗ

ಕನ್ನಡ ನಾಡಿನ ಕಲೆ, ಸಾಹಿತ್ಯ ಮತ್ತು ಜನಪದ ಪರಂಪರೆ ನಮ್ಮ ಹೆಮ್ಮೆ: ಶಾಸಕ ಸಮರ್ಥ್ ಶಾಮನೂರು



"ಮುಂಜಾನೆಯ ಮೆರಗು"
ದಾವಣಗೆರೆ ನ, 15– ಕನ್ನಡ ನಾಡಿನ ಶ್ರೀಮಂತ ಕಲೆ, ಸಾಹಿತ್ಯ, ಸಂಗೀತ ಹಾಗೂ ಜನಪದ ಪರಂಪರೆಯನ್ನು ಉಳಿಸಿ ಬೆಳೆಸುವಲ್ಲಿ ಸಾಂಸ್ಕೃತಿಕ ಉತ್ಸವಗಳು ಮಹತ್ವದ ಪಾತ್ರ ವಹಿಸುತ್ತವೆ ಎಂದು ಶಾಸಕ ಸಮರ್ಥ್ ಶಾಮನೂರು ತಿಳಿಸಿದರು.

ನಗರದ ಲಲಿತಕಲಾ ವಿಶ್ವವಿದ್ಯಾಲಯದ ಆವರಣದಲ್ಲಿರುವ ಥೀಮ್ ಪಾರ್ಕ್‌ನಲ್ಲಿ ಆಯೋಜಿಸಿದ್ದ 'ದಾವಣಗೆರೆ ಕನ್ನಡೋತ್ಸವ' ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಕನ್ನಡ ಭಾಷೆ, ನಾಡಿನ ಸಂಸ್ಕೃತಿ ಹಾಗೂ ಕಲಾ ಪರಂಪರೆ ನಮ್ಮ ಹೆಮ್ಮೆಯ ಪ್ರತೀಕಗಳಾಗಿವೆ. ಇಂತಹ ಉತ್ಸವಗಳ ಮೂಲಕ ಸ್ಥಳೀಯ ಕಲಾವಿದರು ಹಾಗೂ ಪ್ರತಿಭಾವಂತರಿಗೆ ವೇದಿಕೆ ಕಲ್ಪಿಸುವುದರ ಜೊತೆಗೆ ಅವರ ಕಲಾ ಪ್ರದರ್ಶನಕ್ಕೆ ಪ್ರೋತ್ಸಾಹ ನೀಡಿದಂತಾಗುತ್ತದೆ. ಕನ್ನಡದ ಸಾಂಸ್ಕೃತಿಕ ವೈಭವವನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ನಿಟ್ಟಿನಲ್ಲಿ ಇಂತಹ ಕಾರ್ಯಕ್ರಮಗಳು ಸಹಕಾರಿಯಾಗಿವೆ ಎಂದು ಹೇಳಿದರು.

ಕನ್ನಡಾಭಿಮಾನಿಗಳು ಹಾಗೂ ಕಲಾವಿದರಿಗೆ ಶುಭ ಹಾರೈಸಿದ ಅವರು, ಕನ್ನಡ ಭಾಷೆ ಮತ್ತು ಸಂಸ್ಕೃತಿಯ ಸಂರಕ್ಷಣೆ ಹಾಗೂ ಬೆಳವಣಿಗೆಗೆ ಎಲ್ಲರೂ ಕೈಜೋಡಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾಧ್ಯಕ್ಷ ಶಿವ ರತನ್, ಸಂಘಟನೆಯ ಪದಾಧಿಕಾರಿಗಳು, ಆಯೋಜಕರು, ಕಲಾವಿದರು ಹಾಗೂ ಹೆಚ್ಚಿನ ಸಂಖ್ಯೆಯಲ್ಲಿ ಕನ್ನಡಾಭಿಮಾನಿಗಳು ಉಪಸ್ಥಿತರಿದ್ದರು.

ತುಮಕೂರಿನ ಶಿವಕುಮಾರ ಸ್ವಾಮೀಜಿ ವೃತ್ತದಲ್ಲಿ 7 ಕೋಟಿ ವೆಚ್ಚದ ಬೃಹತ್ ಎಲ್‌ಇಡಿ ಪರದೆ ಲೋಕಾರ್ಪಣೆ



"ಮುಂಜಾನೆಯ ಮೆರಗು"
ತುಮಕೂರು, ನ.15– ನಗರದ ಪ್ರಮುಖ ಕೇಂದ್ರವಾಗಿರುವ ಶ್ರೀ ಶ್ರೀ ಶ್ರೀ ಶಿವಕುಮಾರ ಮಹಾಸ್ವಾಮೀಜಿ ವೃತ್ತಕ್ಕೆ ಆಧುನಿಕ ಸ್ಪರ್ಶ ನೀಡುವ ಉದ್ದೇಶದಿಂದ ಸುಮಾರು 7 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿಪಡಿಸಿರುವ ಬೃಹತ್ ಎಲ್‌ಇಡಿ ಪರದೆಯನ್ನು ಉಪಮುಖ್ಯಮಂತ್ರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಜಿ. ಪರಮೇಶ್ವರ್ ಅವರು ಲೋಕಾರ್ಪಣೆಗೊಳಿಸಿದರು.

ತುಮಕೂರು ಮಹಾನಗರ ಪಾಲಿಕೆ ಹಾಗೂ ತುಮಕೂರು ನಗರಾಭಿವೃದ್ಧಿ ಪ್ರಾಧಿಕಾರದ ವತಿಯಿಂದ ಅನುಷ್ಠಾನಗೊಳಿಸಿರುವ ಈ ಯೋಜನೆಯನ್ನು ಸಿದ್ದಗಂಗಾ ಮಠದ ಪರಮಪೂಜ್ಯ ಶ್ರೀ ಸಿದ್ಧಲಿಂಗ ಮಹಾಸ್ವಾಮೀಜಿಗಳ ದಿವ್ಯ ಸಾನ್ನಿಧ್ಯದಲ್ಲಿ ಉದ್ಘಾಟಿಸಲಾಯಿತು. ಜಿಲ್ಲಾಧಿಕಾರಿ ಶುಭಾ ಕಲ್ಯಾಣ್ ಅವರು ಸೇರಿದಂತೆ ಹಲವು ಗಣ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ನಗರದ ಸೌಂದರ್ಯೀಕರಣಕ್ಕೆ ಮತ್ತಷ್ಟು ಮೆರುಗು ನೀಡುವುದರ ಜೊತೆಗೆ ಆಧುನಿಕ ತಂತ್ರಜ್ಞಾನವನ್ನು ಸಾರ್ವಜನಿಕರ ಉಪಯೋಗಕ್ಕೆ ಬಳಸಿಕೊಳ್ಳುವ ಉದ್ದೇಶದಿಂದ ಈ ಬೃಹತ್ ಎಲ್‌ಇಡಿ ಪರದೆಯನ್ನು ಅಳವಡಿಸಲಾಗಿದೆ. ಇದರ ಮೂಲಕ ಸರ್ಕಾರದ ವಿವಿಧ ಜನಪರ ಯೋಜನೆಗಳು, ಅಭಿವೃದ್ಧಿ ಕಾರ್ಯಗಳು, ಸಾರ್ವಜನಿಕ ಜಾಗೃತಿ ಸಂದೇಶಗಳು, ಪ್ರಮುಖ ಪ್ರಕಟಣೆಗಳು ಹಾಗೂ ಅಗತ್ಯ ಮಾಹಿತಿಗಳನ್ನು ದೃಶ್ಯ ಮಾಧ್ಯಮದ ಮೂಲಕ ಜನರಿಗೆ ತಲುಪಿಸಲು ಅನುಕೂಲವಾಗಲಿದೆ.

ನಗರದ ಪ್ರಮುಖ ವೃತ್ತಗಳಲ್ಲಿ ಒಂದಾಗಿರುವ ಶಿವಕುಮಾರ ಮಹಾಸ್ವಾಮೀಜಿ ವೃತ್ತದಲ್ಲಿ ಈ ಯೋಜನೆ ಜಾರಿಗೊಳಿಸಿರುವುದರಿಂದ ನಗರದ ಸೌಂದರ್ಯ ಹೆಚ್ಚುವುದರ ಜೊತೆಗೆ ಸಾರ್ವಜನಿಕರಿಗೆ ಮಾಹಿತಿಯನ್ನು ತಲುಪಿಸುವ ಪರಿಣಾಮಕಾರಿ ವೇದಿಕೆಯೂ ಲಭ್ಯವಾದಂತಾಗಿದೆ.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಡಾ. ಎನ್. ತಿಪ್ಪೇಸ್ವಾಮಿ, ಜನಪ್ರತಿನಿಧಿಗಳು, ತುಮಕೂರು ಮಹಾನಗರ ಪಾಲಿಕೆ ಹಾಗೂ ನಗರಾಭಿವೃದ್ಧಿ ಪ್ರಾಧಿಕಾರದ ಅಧಿಕಾರಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಗಣ್ಯರು ಉಪಸ್ಥಿತರಿದ್ದರು.

ಯುವವಾಹಿನಿ ಸೇವಾ ಚಟುವಟಿಕೆಗಳು ಮತ್ತಷ್ಟು ವಿಸ್ತಾರಗೊಳ್ಳಲಿ: ಬಿ.ಕೆ. ಹರಿಪ್ರಸಾದ್



"ಮುಂಜಾನೆಯ ಮೆರಗು"
ಮಂಗಳೂರು ನ, 15– ಸಮಾಜದಲ್ಲಿ ಶಿಕ್ಷಣ, ಸಂಘಟನೆ, ಸಾಮಾಜಿಕ ಜಾಗೃತಿ ಹಾಗೂ ಮಾನವೀಯ ಮೌಲ್ಯಗಳ ಬೆಳವಣಿಗೆಗೆ ಯುವ ಸಂಘಟನೆಗಳ ಕೊಡುಗೆ ಮಹತ್ವದ್ದಾಗಿದೆ ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ತಿಳಿಸಿದರು.

ನಗರದಲ್ಲಿ ಯುವವಾಹಿನಿ ಕೇಂದ್ರ ಸಮಿತಿಯ ನೂತನ ಕಚೇರಿಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಯುವವಾಹಿನಿ ಸಂಘಟನೆಯು ಸಮಾಜಮುಖಿ ಚಟುವಟಿಕೆಗಳ ಮೂಲಕ ಜನರ ನಡುವೆ ಉತ್ತಮ ಕಾರ್ಯಗಳನ್ನು ಮಾಡುತ್ತಿದೆ. ಮುಂದಿನ ದಿನಗಳಲ್ಲಿಯೂ ಶಿಕ್ಷಣ, ಸಾಮಾಜಿಕ ಜಾಗೃತಿ ಹಾಗೂ ಮಾನವೀಯ ಮೌಲ್ಯಗಳನ್ನು ಬೆಳೆಸುವ ನಿಟ್ಟಿನಲ್ಲಿ ಸಂಘಟನೆಯ ಸೇವಾ ಚಟುವಟಿಕೆಗಳು ಮತ್ತಷ್ಟು ವಿಸ್ತಾರಗೊಳ್ಳಲಿ ಎಂದು ಆಶಿಸಿದರು.

ನೂತನ ಕಚೇರಿಯ ಉದ್ಘಾಟನೆಯ ಮೂಲಕ ಸಂಘಟನೆಯ ಆಡಳಿತಾತ್ಮಕ ಹಾಗೂ ಸಾಮಾಜಿಕ ಚಟುವಟಿಕೆಗಳಿಗೆ ಅನುಕೂಲವಾಗಲಿದ್ದು, ಪದಾಧಿಕಾರಿಗಳು ಮತ್ತು ಸದಸ್ಯರು ಸಂಘಟನೆಯ ಉದ್ದೇಶಗಳನ್ನು ಪರಿಣಾಮಕಾರಿಯಾಗಿ ಮುನ್ನಡೆಸಬೇಕು ಎಂದು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಪರಮಪೂಜ್ಯ ಶ್ರೀ ವಿಖ್ಯಾತಾನಂದ ಸ್ವಾಮೀಜಿಗಳು, ಶಾಸಕ ಭರತ್ ಶೆಟ್ಟಿ, ದಕ್ಷಿಣ ಕನ್ನಡ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಪದ್ಮರಾಜ್ ಪೂಜಾರಿ, ಕುದ್ರೋಳಿ ಕ್ಷೇತ್ರಾಡಳಿತ ಮಂಡಳಿ ಅಧ್ಯಕ್ಷ ಜೈರಾಜ್, ಯುವವಾಹಿನಿ ಅಧ್ಯಕ್ಷ ಅಶೋಕ್ ಕುಮಾರ್ ಪಡ್ಡು ಸೇರಿದಂತೆ ಸಂಘಟನೆಯ ಪದಾಧಿಕಾರಿಗಳು, ಸದಸ್ಯರು ಹಾಗೂ ಹಲವು ಗಣ್ಯರು ಉಪಸ್ಥಿತರಿದ್ದರು.

ನಮ್ಮ ಮೆಟ್ರೋ ಗುಲಾಬಿ ಮಾರ್ಗದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪ್ರಯಾಣ: ಪ್ರಯಾಣಿಕರೊಂದಿಗೆ ಸಂವಾದ



"ಮುಂಜಾನೆಯ ಮೆರಗು"
ಬೆಂಗಳೂರು ನ, 15– ನಗರದ ಮೆಟ್ರೋ ಸಂಪರ್ಕ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಕಾಳೇನ ಅಗ್ರಹಾರದಿಂದ ಎಸ್.ಜಿ. ಪಾಳ್ಯವರೆಗಿನ ನಮ್ಮ ಮೆಟ್ರೋದ ನೂತನ ಗುಲಾಬಿ ಮಾರ್ಗದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಇಂದು ಪ್ರಯಾಣಿಸಿ, ಸಹಪ್ರಯಾಣಿಕರೊಂದಿಗೆ ಸಂವಾದ ನಡೆಸಿದರು.

ಮೆಟ್ರೋದಲ್ಲಿ ಪ್ರಯಾಣಿಸಿದ ಮುಖ್ಯಮಂತ್ರಿ ಅವರು, ಪ್ರಯಾಣಿಕರೊಂದಿಗೆ ಮಾತುಕತೆ ನಡೆಸಿ ಅವರ ಅನುಭವ ಹಾಗೂ ಅಭಿಪ್ರಾಯಗಳನ್ನು ಆಲಿಸಿದರು. ನೂತನ ಮೆಟ್ರೋ ಮಾರ್ಗದ ಸಂಪರ್ಕ ವ್ಯವಸ್ಥೆ ಮತ್ತು ಸಾರ್ವಜನಿಕರಿಗೆ ದೊರೆಯಲಿರುವ ಪ್ರಯೋಜನಗಳ ಕುರಿತು ಈ ಸಂದರ್ಭದಲ್ಲಿ ಗಮನ ಹರಿಸಿದರು.

ಕಾಳೇನ ಅಗ್ರಹಾರದಿಂದ ಎಸ್.ಜಿ. ಪಾಳ್ಯವರೆಗಿನ ಎತ್ತರಿಸಿದ ಮಾರ್ಗವು ಬೆಂಗಳೂರಿನ ಮೆಟ್ರೋ ಸಂಪರ್ಕ ಜಾಲಕ್ಕೆ ಮತ್ತಷ್ಟು ಬಲ ನೀಡಲಿದೆ. ಇದರಿಂದ ನಗರದ ಪ್ರಮುಖ ಪ್ರದೇಶಗಳ ನಡುವಿನ ಪ್ರಯಾಣ ಸುಲಭವಾಗುವುದರ ಜೊತೆಗೆ, ರಸ್ತೆ ಸಂಚಾರ ದಟ್ಟಣೆ ಕಡಿಮೆ ಮಾಡಲು ಸಹಕಾರಿಯಾಗಲಿದೆ.

ನೂತನ ಮಾರ್ಗದಿಂದ ಲಕ್ಷಾಂತರ ಪ್ರಯಾಣಿಕರಿಗೆ ದೈನಂದಿನ ಪ್ರಯಾಣದಲ್ಲಿ ಅನುಕೂಲವಾಗಲಿದ್ದು, ಸಮಯ ಉಳಿತಾಯ ಹಾಗೂ ಸಾರ್ವಜನಿಕ ಸಾರಿಗೆ ಬಳಕೆಗೆ ಉತ್ತೇಜನ ದೊರೆಯಲಿದೆ ಎಂದು ತಿಳಿಸಲಾಯಿತು.

ಬೆಂಗಳೂರು ನಗರದ ಬೆಳೆಯುತ್ತಿರುವ ಸಾರಿಗೆ ಅಗತ್ಯಗಳಿಗೆ ಅನುಗುಣವಾಗಿ ಮೆಟ್ರೋ ಸಂಪರ್ಕ ವ್ಯವಸ್ಥೆಯನ್ನು ವಿಸ್ತರಿಸುವುದು ಹಾಗೂ ಸುಗಮ ಸಂಚಾರಕ್ಕೆ ಆದ್ಯತೆ ನೀಡುವುದು ಈ ಯೋಜನೆಯ ಪ್ರಮುಖ ಉದ್ದೇಶವಾಗಿದೆ.

ಜನಸ್ಪಂದನ ಕಾರ್ಯಕ್ರಮದಲ್ಲಿ ಮಹಿಳೆಯರ ಅಹವಾಲು ಆಲಿಸಿದ ಡಾ. ನಾಗಲಕ್ಷ್ಮೀ ಚೌಧರಿ



"ಮುಂಜಾನೆಯ ಮೆರಗು"
ಬೆಂಗಳೂರು ನ, 15– ಮಹಿಳೆಯರ ಸಮಸ್ಯೆಗಳಿಗೆ ಸ್ಪಂದಿಸಿ, ಅವರ ಹಕ್ಕುಗಳ ರಕ್ಷಣೆ ಹಾಗೂ ನ್ಯಾಯ ಒದಗಿಸುವ ಉದ್ದೇಶದಿಂದ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮೀ ಚೌಧರಿ ಅವರು ತಮ್ಮ ಗೃಹ ಕಚೇರಿಯಲ್ಲಿ ಜನಸ್ಪಂದನ ಕಾರ್ಯಕ್ರಮ ನಡೆಸಿ ಸಾರ್ವಜನಿಕರ ಅಹವಾಲುಗಳನ್ನು ಆಲಿಸಿದರು.

ಕಾರ್ಯಕ್ರಮದಲ್ಲಿ ಮಹಿಳೆಯರು ಸೇರಿದಂತೆ ಸಾರ್ವಜನಿಕರು ತಮ್ಮ ವಿವಿಧ ಸಮಸ್ಯೆಗಳು ಹಾಗೂ ದೂರುಗಳನ್ನು ಅಧ್ಯಕ್ಷರ ಗಮನಕ್ಕೆ ತಂದರು. ಪ್ರತಿಯೊಬ್ಬರ ಅಹವಾಲುಗಳನ್ನು ಆಲಿಸಿದ ಡಾ. ನಾಗಲಕ್ಷ್ಮೀ ಚೌಧರಿ ಅವರು, ಸಮಸ್ಯೆಗಳ ಸ್ವರೂಪದ ಕುರಿತು ಮಾಹಿತಿ ಪಡೆದು, ಅವುಗಳ ತ್ವರಿತ ಪರಿಹಾರಕ್ಕೆ ಅಗತ್ಯ ಕ್ರಮ ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಮಹಿಳೆಯರ ಹಕ್ಕುಗಳ ರಕ್ಷಣೆ, ಸುರಕ್ಷತೆ ಹಾಗೂ ಅವರಿಗೆ ಶೀಘ್ರ ನ್ಯಾಯ ದೊರಕಿಸಿಕೊಡುವುದು ತಮ್ಮ ಪ್ರಮುಖ ಆದ್ಯತೆಯಾಗಿದೆ. ಮಹಿಳೆಯರಿಂದ ಸಲ್ಲಿಕೆಯಾಗುವ ಪ್ರತಿಯೊಂದು ಅಹವಾಲಿಗೂ ಸೂಕ್ತವಾಗಿ ಸ್ಪಂದಿಸಿ, ನ್ಯಾಯ ಒದಗಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಲಾಗುತ್ತಿದೆ ಎಂದು ತಿಳಿಸಿದರು.

ಇದೇ ವೇಳೆ ಹಲವಾರು ಹಿತೈಷಿಗಳು ಹಾಗೂ ಸಾರ್ವಜನಿಕರು ವಿವಿಧ ಕಾರ್ಯಕ್ರಮಗಳಿಗೆ ಅವರನ್ನು ಆತ್ಮೀಯವಾಗಿ ಆಹ್ವಾನಿಸಿದರು.

ಮಹಿಳೆಯರ ಸಮಸ್ಯೆಗಳಿಗೆ ಆದ್ಯತೆ ನೀಡಿ, ಅವರ ದೂರುಗಳಿಗೆ ಸೂಕ್ತ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಮಹಿಳಾ ಆಯೋಗ ನಿರಂತರವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಅವರು ತಿಳಿಸಿದರು.

ಮುಂಬರುವ ಚುನಾವಣೆಗಳಿಗೆ ಬಿಜೆಪಿ ಸಜ್ಜು: ಸಂಘಟನೆ ಬಲವರ್ಧನೆಗೆ ರಾಜ್ಯ ಪ್ರಮುಖರ ಸಭೆಯಲ್ಲಿ ಚರ್ಚೆ



"ಮುಂಜಾನೆಯ ಮೆರಗು"
ಬೆಂಗಳೂರು ನ, 15– ಮುಂಬರುವ ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಚುನಾವಣೆಗಳು ಹಾಗೂ ಹಿರಿಯೂರು ವಿಧಾನಸಭಾ ಕ್ಷೇತ್ರದ ಉಪಚುನಾವಣೆಯ ಹಿನ್ನೆಲೆಯಲ್ಲಿ ಪಕ್ಷದ ಸಂಘಟನೆಯನ್ನು ಬಲಪಡಿಸುವುದು ಮತ್ತು ಚುನಾವಣಾ ಕಾರ್ಯತಂತ್ರ ರೂಪಿಸುವ ಕುರಿತು ಬಿಜೆಪಿ ರಾಜ್ಯ ಪ್ರಮುಖರ ಸಭೆ ಬೆಂಗಳೂರಿನಲ್ಲಿ ನಡೆಯಿತು.

ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಹಾಗೂ ರಾಜ್ಯ ಉಸ್ತುವಾರಿ ಹರೀಶ್ ದ್ವಿವೇದಿ ಮತ್ತು ಸಹ ಉಸ್ತುವಾರಿ ಕಸಮ್ ಅವರ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಭಾಗವಹಿಸಿ ಪಕ್ಷದ ಸಂಘಟನಾತ್ಮಕ ಚಟುವಟಿಕೆಗಳ ಕುರಿತು ಚರ್ಚಿಸಿದರು.

ಸಭೆಯಲ್ಲಿ ಮುಂಬರುವ ಚುನಾವಣೆಗಳನ್ನು ಎದುರಿಸಲು ಪಕ್ಷ ಕೈಗೊಳ್ಳಬೇಕಾದ ಸಿದ್ಧತೆಗಳು, ಬೂತ್ ಮಟ್ಟದಲ್ಲಿ ಸಂಘಟನೆಯನ್ನು ಮತ್ತಷ್ಟು ಬಲಪಡಿಸುವುದು ಹಾಗೂ ಕಾರ್ಯಕರ್ತರನ್ನು ಚುನಾವಣಾ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳುವ ಕುರಿತು ಸಮಾಲೋಚನೆ ನಡೆಸಲಾಯಿತು.

ಸ್ಥಳೀಯ ಸಂಸ್ಥೆಗಳ ಚುನಾವಣೆಗಳ ಹಿನ್ನೆಲೆಯಲ್ಲಿ ಪಕ್ಷದ ಪದಾಧಿಕಾರಿಗಳು ಮತ್ತು ಕಾರ್ಯಕರ್ತರ ನಡುವೆ ಸಮನ್ವಯ ಸಾಧಿಸುವುದು, ಸಂಘಟನೆಯ ಕಾರ್ಯವೈಖರಿಯನ್ನು ಚುರುಕುಗೊಳಿಸುವುದು ಹಾಗೂ ತಳಮಟ್ಟದಲ್ಲಿ ಪಕ್ಷದ ಸಂಪರ್ಕ ಜಾಲವನ್ನು ವಿಸ್ತರಿಸುವ ಕುರಿತು ಚರ್ಚೆ ನಡೆಯಿತು.

ಚುನಾವಣಾ ಸಿದ್ಧತೆಯ ಭಾಗವಾಗಿ ಎಲ್ಲ ಹಂತದ ಮುಖಂಡರು ಮತ್ತು ಕಾರ್ಯಕರ್ತರು ಒಗ್ಗಟ್ಟಿನಿಂದ ಕಾರ್ಯನಿರ್ವಹಿಸುವ ಮೂಲಕ ಪಕ್ಷದ ಸಂಘಟನೆಯನ್ನು ಸದೃಢಗೊಳಿಸುವ ಸಂಕಲ್ಪವನ್ನು ಸಭೆಯಲ್ಲಿ ವ್ಯಕ್ತಪಡಿಸಲಾಯಿತು.

ಸಭೆಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ವಿರೋದ ಪಕ್ಷದ ನಾಯಕ ಆರ್.ಅಶೋಕ್, ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಸೇರಿದಂತೆ ಪಕ್ಷದ ಹಿರಿಯ ನಾಯಕರು, ಪದಾಧಿಕಾರಿಗಳು ಹಾಗೂ ಪ್ರಮುಖರು ಉಪಸ್ಥಿತರಿದ್ದರು.

ಆತ್ಮನಿರ್ಭರ ಭಾರತ ನಿರ್ಮಾಣದಲ್ಲಿ ಕೈಗಾರಿಕಾ ಸಂಸ್ಥೆಗಳ ಪಾತ್ರ ಮಹತ್ವದ್ದು



"ಮುಂಜಾನೆಯ ಮೆರಗು"
ಬೆಂಗಳೂರು ನ, 15– ದೇಶವನ್ನು ಆತ್ಮನಿರ್ಭರ ಹಾಗೂ ತಂತ್ರಜ್ಞಾನ ಕ್ಷೇತ್ರದಲ್ಲಿ ಸ್ವಾವಲಂಬಿಯನ್ನಾಗಿ ರೂಪಿಸುವ ನಿಟ್ಟಿನಲ್ಲಿ ಕೈಗಾರಿಕಾ ಮತ್ತು ಉತ್ಪಾದನಾ ಸಂಸ್ಥೆಗಳ ಕೊಡುಗೆ ಮಹತ್ವದ್ದಾಗಿದೆ ಎಂದು ಕೇಂದ್ರ ಉಕ್ಕು ಮತ್ತು ಭಾರೀ ಕೈಗಾರಿಕೆ ಸಚಿವ ಹೆಚ್.ಡಿ. ಕುಮಾರಸ್ವಾಮಿ ತಿಳಿಸಿದರು.

ನಗರದ ನಾಡಪ್ರಭು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಸಮೀಪವಿರುವ ಡೈನಾಮ್ಯಾಟಿಕ್ ಟೆಕ್ನಾಲಜೀಸ್ ಲಿಮಿಟೆಡ್ ಕಂಪನಿಯ ವತಿಯಿಂದ ಶನಿವಾರ ಸಂಜೆ ಆಯೋಜಿಸಿದ್ದ 'ಡೈನೋತ್ಸವ 2026' ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಭಾರತವು ಆತ್ಮನಿರ್ಭರ ಭಾರತದ ಪರಿಕಲ್ಪನೆಯನ್ನು ಯಶಸ್ವಿಯಾಗಿ ಅಳವಡಿಸಿಕೊಂಡಿದ್ದು, 2047ರ ವೇಳೆಗೆ ವಿಕಸಿತ ಭಾರತ ನಿರ್ಮಿಸುವ ಮಹತ್ವಾಕಾಂಕ್ಷೆಯ ಗುರಿಯೊಂದಿಗೆ ಮುನ್ನಡೆಯುತ್ತಿದೆ. ಈ ಗುರಿ ಸಾಧನೆಯಲ್ಲಿ ತಂತ್ರಜ್ಞಾನ ಮತ್ತು ಉತ್ಪಾದನಾ ಕ್ಷೇತ್ರಗಳ ಬೆಳವಣಿಗೆ ಪ್ರಮುಖ ಪಾತ್ರ ವಹಿಸಲಿವೆ ಎಂದರು.

ಡೈನಾಮ್ಯಾಟಿಕ್ ಟೆಕ್ನಾಲಜೀಸ್ ಲಿಮಿಟೆಡ್ ತನ್ನ ತಾಂತ್ರಿಕ ಸಾಮರ್ಥ್ಯ, ದಕ್ಷತೆ ಹಾಗೂ ಉತ್ಪಾದನಾ ಪರಿಣತಿಯ ಮೂಲಕ ದೇಶದ ತಂತ್ರಜ್ಞಾನ ಮತ್ತು ಕೈಗಾರಿಕಾ ವಲಯದಲ್ಲಿ ಮಹತ್ವದ ಪಾತ್ರ ನಿರ್ವಹಿಸುತ್ತಿರುವುದು ಸಂತಸದ ಸಂಗತಿಯಾಗಿದೆ. ದೇಶೀಯ ಉತ್ಪಾದನೆಗೆ ಉತ್ತೇಜನ ನೀಡುವ ಇಂತಹ ಸಂಸ್ಥೆಗಳು ಆತ್ಮನಿರ್ಭರ ಭಾರತದ ಆಶಯಕ್ಕೆ ಮತ್ತಷ್ಟು ಬಲ ತುಂಬುತ್ತಿವೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕಂಪನಿಯ ಸಿಇಒ ಹಾಗೂ ವ್ಯವಸ್ಥಾಪಕ ನಿರ್ದೇಶಕ ಡಾ. ಉದಯಂತ್ ಮಲ್ಹೋತ್ರ, ಮುಖ್ಯ ತಾಂತ್ರಿಕ ಅಧಿಕಾರಿ ವಿ. ರವಿಚಂದರ್, ಕಾರ್ಯನಿರ್ವಾಹಕ ನಿರ್ದೇಶಕ ಚಲಪತಿ, ಪ್ರಧಾನ ವ್ಯವಸ್ಥಾಪಕಿ ಅಹಿಲ್ಯಾ ಮಲ್ಹೋತ್ರ ಸೇರಿದಂತೆ ಕಂಪನಿಯ ಅಧಿಕಾರಿಗಳು, ಸಿಬ್ಬಂದಿ ಹಾಗೂ ಗಣ್ಯರು ಉಪಸ್ಥಿತರಿದ್ದರು.

ಕರ್ನಾಟಕ ಕಂಚಿನ ಕಲಾಕೃತಿಗಳ ಪ್ರದರ್ಶನ ವೀಕ್ಷಿಸಿದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್



"ಮುಂಜಾನೆಯ ಮೆರಗು"
ಮೈಸೂರು ನ, 15– ನಗರದ ಕಾವೇರಿ ಎಂಪೋರಿಯಂನಲ್ಲಿ ಕರ್ನಾಟಕ ರಾಜ್ಯ ಕರಕುಶಲ ಅಭಿವೃದ್ಧಿ ನಿಗಮದ ವತಿಯಿಂದ ಆಯೋಜಿಸಿದ್ದ ನಾಡಿನ ಸಾಂಪ್ರದಾಯಿಕ ಕಲೆಯಾದ 'ಕರ್ನಾಟಕ ಕಂಚಿನ ವಸ್ತುಗಳ' ಪ್ರದರ್ಶನಕ್ಕೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಭೇಟಿ ನೀಡಿ ಕಲಾಕೃತಿಗಳನ್ನು ವೀಕ್ಷಿಸಿದರು.

ಕಂಚಿನ ಕಲಾಕೃತಿಗಳನ್ನು ಕಲಾವಿದರು ತಮ್ಮ ಕೈಚಳಕದಿಂದ ರೂಪಿಸಿರುವ ವೈವಿಧ್ಯಮಯ ವಿನ್ಯಾಸ ಹಾಗೂ ಕಲಾತ್ಮಕ ಸೌಂದರ್ಯವನ್ನು ವೀಕ್ಷಿಸಿದ ಅವರು, ಕಲಾವಿದರ ಸೃಜನಶೀಲತೆ ಮತ್ತು ಕರಕುಶಲ ಕೌಶಲವನ್ನು ಮೆಚ್ಚಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವ

ಮಕ್ಕಳಲ್ಲಿ ಉತ್ತಮ ಸಂಸ್ಕಾರ, ಶಿಸ್ತು ಮತ್ತು ಆತ್ಮವಿಶ್ವಾಸ ಬೆಳೆಸುವುದು ಅಗತ್ಯ: ಅಮರೇಶ್

“ಮುಂಜಾನೆಯ ಮೆರಗು”

ಜಗಳೂರು ನ, 15– ಮಕ್ಕಳೇ ದೇಶದ ಭವಿಷ್ಯದ ಪ್ರಜೆಗಳಾಗಿದ್ದು, ಅವರಲ್ಲಿ ಉತ್ತಮ ಸಂಸ್ಕಾರ, ಶಿಸ್ತು, ಆತ್ಮವಿಶ್ವಾಸ ಹಾಗೂ ಮಾನವೀಯ ಮೌಲ್ಯಗಳನ್ನು ಬೆಳೆಸುವ ಮೂಲಕ ಜವಾಬ್ದಾರಿಯುತ ನಾಗರಿಕರನ್ನಾಗಿ ರೂಪಿಸಬೇಕು ಎಂದು ಅಂಬೇಡ್ಕರ್ ವಸತಿ ಶಾಲೆಯ ಪ್ರಾಂಶುಪಾಲ ಅಮರೇಶ್ ಹೇಳಿದರು.

ತಾಲೂಕಿನ ದೊಣೆಹಳ್ಳಿ ಹೊಸಟ್ಟಿ ಸಮೀಪದಲ್ಲಿರುವ ಅಂಬೇಡ್ಕರ್ ವಸತಿ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಮಕ್ಕಳ ದಿನಾಚರಣೆ ಕಾರ್ಯಕ್ರಮವನ್ನು ಉದ್ದೇಶಿಸಿ ಅವರು ಮಾತನಾಡಿದರು.

ಮಕ್ಕಳ ಹಕ್ಕುಗಳು, ಶಿಕ್ಷಣದ ಮಹತ್ವ ಹಾಗೂ ಅವರ ಸರ್ವತೋಮುಖ ಬೆಳವಣಿಗೆಗೆ ಪೂರಕವಾದ ವಾತಾವರಣ ಕಲ್ಪಿಸುವುದು ಪ್ರತಿಯೊಬ್ಬರ



ಜವಾಬ್ದಾರಿಯಾಗಿದೆ. ವಿದ್ಯಾರ್ಥಿಗಳು ಬಾಲ್ಯದಿಂದಲೇ ಉತ್ತಮ ಹವ್ಯಾಸಗಳನ್ನು ರೂಢಿಸಿಕೊಂಡು, ಶಿಕ್ಷಣದ ಜೊತೆಗೆ ಕ್ರೀಡೆ, ಸಾಂಸ್ಕೃತಿಕ ಚಟುವಟಿಕೆಗಳಲ್ಲಿಯೂ ಆಸಕ್ತಿ ಬೆಳೆಸಿಕೊಳ್ಳಬೇಕು. ನಿರಂತರ ಪರಿಶ್ರಮ, ಶ್ರದ್ಧೆ ಮತ್ತು ಸಮಯಪಾಲನೆಯಿಂದ ಜೀವನದಲ್ಲಿ ಉನ್ನತ ಸಾಧನೆ ಮಾಡಲು ಸಾಧ್ಯ ಎಂದರು.

ಮಕ್ಕಳಲ್ಲಿ ಅಡಗಿರುವ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸುವುದು ಶಿಕ್ಷಕರು ಹಾಗೂ ಪೋಷಕರ ಕರ್ತವ್ಯವಾಗಿದೆ. ಪ್ರತಿಯೊಬ್ಬ ವಿದ್ಯಾರ್ಥಿಗೂ ತನ್ನದೇ ಆದ ಸಾಮರ್ಥ್ಯವಿದ್ದು, ಅದನ್ನು ಹೊರತರುವ ನಿಟ್ಟಿನಲ್ಲಿ ಸೂಕ್ತ ಮಾರ್ಗದರ್ಶನ ನೀಡಬೇಕು ಎಂದು ತಿಳಿಸಿದರು.

ಮಕ್ಕಳ ದಿನಾಚರಣೆ ಕೇವಲ ಆಚರಣೆಗೆ ಸೀಮಿತವಾಗದೆ, ಮಕ್ಕಳ ಹಕ್ಕುಗಳು, ಕರ್ತವ್ಯಗಳು ಮತ್ತು ಭವಿಷ್ಯದ ಜವಾಬ್ದಾರಿಗಳ ಕುರಿತು ಅರಿವು ಮೂಡಿಸುವ ದಿನವಾಗಬೇಕು. ವಿದ್ಯಾರ್ಥಿಗಳು ಪರಸ್ಪರ ಗೌರವ, ಸಹಕಾರ ಮತ್ತು ಸೌಹಾರ್ದತೆಯಿಂದ ನಡೆದುಕೊಂಡು, ಸಮಾಜದಲ್ಲಿ ಉತ್ತಮ ಬದಲಾವಣೆ ತರಲು ಮುಂದಾಗಬೇಕು. ದೇಶದ ಅಭಿವೃದ್ಧಿಯಲ್ಲಿ ತಮ್ಮದೇ ಆದ ಕೊಡುಗೆ ನೀಡುವ ಸಂಕಲ್ಪವನ್ನು ಪ್ರತಿಯೊಬ್ಬರೂ ಮಾಡಿಕೊಳ್ಳಬೇಕು ಎಂದು ಅಮರೇಶ್ ಕರೆ ನೀಡಿದರು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು, ಭಾಷಣ, ದೇಶಭಕ್ತಿ ಗೀತೆಗಳು ಹಾಗೂ ಮನರಂಜನಾ ಚಟುವಟಿಕೆಗಳು ನಡೆದವು.

ಈ ಸಂದರ್ಭದಲ್ಲಿ ಶಾಲೆಯ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಮಕ್ಕಳ ದಿನಾಚರಣೆ ಆಚರಣೆ

“ಮುಂಜಾನೆಯ ಮೆರಗು”

ಜಗಳೂರು ನ, 15– ತಾಲೂಕಿನ ಬಿದರಕೆರೆ ಗ್ರಾಮದ ಅಂಗನವಾಡಿ ಕೇಂದ್ರದಲ್ಲಿ ಮಕ್ಕಳ ದಿನಾಚರಣೆ ಕಾರ್ಯಕ್ರಮವನ್ನು ಸಂಭ್ರಮದಿಂದ ಆಚರಿಸಲಾಯಿತು.

ಕಾರ್ಯಕ್ರಮದ ಅಂಗವಾಗಿ ಮಕ್ಕಳಿಗೆ ಶುಭಾಶಯಗಳನ್ನು ತಿಳಿಸಿ, ಮಕ್ಕಳ ದಿನಾಚರಣೆಯ ಮಹತ್ವದ ಕುರಿತು ತಿಳಿಸಲಾಯಿತು. ಮಕ್ಕಳಲ್ಲಿ ಸಂತಸ ಮೂಡಿಸುವ ಉದ್ದೇಶದಿಂದ ವಿವಿಧ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಯಿತು. ಮಕ್ಕಳಿಗೆ ಆಟ, ಹಾಡು ಸೇರಿದಂತೆ ಮನರಂಜನಾತ್ಮಕ ಚಟುವಟಿಕೆಗಳ ಮೂಲಕ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.



ಮಕ್ಕಳ ಬೆಳವಣಿಗೆಯಲ್ಲಿ ಪ್ರೀತಿ, ಕಾಳಜಿ, ಪೌಷ್ಟಿಕ ಆಹಾರ ಹಾಗೂ ಉತ್ತಮ ಶಿಕ್ಷಣದ ಮಹತ್ವವನ್ನು ತಿಳಿಸುವ ಮೂಲಕ ಮಕ್ಕಳ ದಿನಾಚರಣೆಯ ಉದ್ದೇಶವನ್ನು ಸ್ಮರಿಸಲಾಯಿತು.

ಈ ಸಂದರ್ಭದಲ್ಲಿ ಅಂಗನವಾಡಿ ಕಾರ್ಯಕರ್ತೆ, ಸಹಾಯಕಿ ಹಾಗೂ ಮಕ್ಕಳು ಉಪಸ್ಥಿತರಿದ್ದರು.

ಬಿರ್ಸಾ ಮುಂಡಾ ಜಯಂತಿ ಕಾರ್ಯಕ್ರಮದಲ್ಲಿ ಎಂ.ಡಿ. ಕೀರ್ತಿಕುಮಾರ್

“ಮುಂಜಾನೆಯ ಮೆರಗು”

ಜಗಳೂರು ನ, 15– ಬುಡಕಟ್ಟು ಸಮುದಾಯಗಳ ಹಕ್ಕುಗಳಿಗಾಗಿ ಹೋರಾಡಿದ ಮಹಾನ್ ಸ್ವಾತಂತ್ರ್ಯ ಹೋರಾಟಗಾರ, ಆದಿವಾಸಿಗಳ ಆರಾಧ್ಯದೈವ ಹಾಗೂ ಜನನಾಯಕ ಭಗವಾನ್ ಬಿರ್ಸಾ ಮುಂಡಾ ಅವರ ಜಯಂತಿಯನ್ನು ಜಾರ್ಖಂಡ್ ರಾಜ್ಯದ ಪಶ್ಚಿಮ ಸಿಂಗ್ಭೂಮ್ ಜಿಲ್ಲೆಯ ಚೈಬಾಸಾ ಪಟ್ಟಣದಲ್ಲಿರುವ ಬುಡಕಟ್ಟು ಸಂಶೋಧನೆ ಮತ್ತು ತರಬೇತಿ ಕೇಂದ್ರದಲ್ಲಿ ವಿಶೇಷವಾಗಿ ಆಚರಿಸಲಾಯಿತು.

ಅಖಿಲ ಭಾರತ ಕಾಂಗ್ರೆಸ್ ಸಮಿತಿಯ ಆದಿವಾಸಿ ಸಮಿತಿ ವತಿಯಿಂದ ಆಯೋಜಿಸಲಾಗಿದ್ದ ವಿಶೇಷ ತರಬೇತಿ ಕಾರ್ಯಕ್ರಮದ ಅಂಗವಾಗಿ ನಡೆದ ಜಯಂತಿ ಆಚರಣೆಯಲ್ಲಿ ಕೆಪಿಸಿಸಿ ಪರಿಶಿಷ್ಟ ಪಂಗಡ (ಎಸ್ಟಿ) ಘಟಕದ ರಾಜ್ಯ ಪ್ರಧಾನ ಕಾರ್ಯದರ್ಶಿ ಎಂ.ಡಿ. ಕೀರ್ತಿಕುಮಾರ್ ಅವರು ಭಾಗವಹಿಸಿ, ಭಗವಾನ್ ಬಿರ್ಸಾ ಮುಂಡಾ ಅವರ ಭಾವಚಿತ್ರಕ್ಕೆ ಗೌರವ ನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಭಗವಾನ್ ಬಿರ್ಸಾ ಮುಂಡಾ ಅವರು ಬ್ರಿಟಿಷರ ವಸಾಹತುಶಾಹಿ ಆಡಳಿತದ ವಿರುದ್ಧ ಧೈರ್ಯದಿಂದ ಹೋರಾಡಿದ ಅಪ್ರತಿಮ ಸ್ವಾತಂತ್ರ್ಯ ಹೋರಾಟಗಾರರಾಗಿದ್ದಾರೆ. ಆದಿವಾಸಿ ಸಮುದಾಯಗಳ ಭೂಮಿ, ಅರಣ್ಯ, ಸಂಸ್ಕೃತಿ, ಸ್ವಾಭಿಮಾನ ಹಾಗೂ ಅಸ್ತಿತ್ವದ ರಕ್ಷಣೆಗಾಗಿ ತಮ್ಮ ಜೀವನವನ್ನೇ ಮುಡಿಪಾಗಿಟ್ಟಿದ್ದರು. ಅವರ ಹೋರಾಟ ಮತ್ತು ತ್ಯಾಗ ಇಂದಿನ ಯುವಜನತೆಗೆ ಸದಾ ಪ್ರೇರಣೆಯಾಗಬೇಕು ಎಂದರು.

ಬಿರ್ಸಾ ಮುಂಡಾ ಅವರು ಆದಿವಾಸಿ ಸಮುದಾಯದಲ್ಲಿ ಸ್ವಾಭಿಮಾನ, ಜಾಗೃತಿ ಹಾಗೂ ಸಂಘಟನಾ ಶಕ್ತಿಯನ್ನು ಬೆಳೆಸುವಲ್ಲಿ ಮಹತ್ವದ ಪಾತ್ರ ವಹಿಸಿದ್ದರು. ಅವರ ಹೋರಾಟದ ಇತಿಹಾಸವನ್ನು ಮುಂದಿನ ಪೀಳಿಗೆಗೆ ಪರಿಚಯಿಸುವುದರ ಜೊತೆಗೆ, ಬುಡಕಟ್ಟು ಸಮುದಾಯಗಳ ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ



ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಬೇಕಿದೆ ಎಂದು ತಿಳಿಸಿದರು.

ವಿಶೇಷ ತರಬೇತಿ ಕಾರ್ಯಕ್ರಮದಲ್ಲಿ ದೇಶದ ವಿವಿಧ ಭಾಗಗಳಿಂದ ಆಗಮಿಸಿದ್ದ ಆದಿವಾಸಿ ಸಮುದಾಯದ ಮುಖಂಡರು ಹಾಗೂ ಪ್ರತಿನಿಧಿಗಳು ಭಾಗವಹಿಸಿ, ಬುಡಕಟ್ಟು ಸಮುದಾಯಗಳ ಅಭಿವೃದ್ಧಿ, ಹಕ್ಕುಗಳ ರಕ್ಷಣೆ, ಸಂಘಟನೆ ಮತ್ತು ಸಾಮಾಜಿಕ ನ್ಯಾಯದ ಕುರಿತು ವಿಚಾರ ವಿನಿಮಯ ನಡೆಸಿದರು.

ಲಿಂಗಣ್ಣನಹಳ್ಳಿ: ಮಕ್ಕಳ ದಿನಾಚರಣೆ

“ಮುಂಜಾನೆಯ ಮೆರಗು”

ಜಗಳೂರು ನ, 15– ತಾಲೂಕಿನ ಲಿಂಗಣ್ಣನಹಳ್ಳಿ ಗ್ರಾಮದ ಅಂಗನವಾಡಿ ಕೇಂದ್ರದಲ್ಲಿ ಮಕ್ಕಳ ದಿನಾಚರಣೆಯನ್ನು ಸಂಭ್ರಮದಿಂದ ಆಚರಿಸಲಾಯಿತು.

ಕಾರ್ಯಕ್ರಮದ ಅಂಗವಾಗಿ ಭಾರತದ ಪ್ರಥಮ ಪ್ರಧಾನಮಂತ್ರಿ ಪಂಡಿತ್ ಜವಾಹರಲಾಲ್ ನೆಹರು ಅವರ ಜನ್ಮದಿನವನ್ನು ಸ್ಮರಿಸಲಾಯಿತು. ಮಕ್ಕಳ ಮೇಲಿನ ಅಪಾರ ಪ್ರೀತಿ ಹಾಗೂ ಕಾಳಜಿಯಿಂದ ಚಾಚಾ ನೆಹರು ಎಂದೇ ಪ್ರಸಿದ್ಧರಾಗಿದ್ದ ಅವರ ಆದರ್ಶಗಳನ್ನು ಸ್ಮರಿಸಲಾಯಿತು.

ಈ ಸಂದರ್ಭದಲ್ಲಿ ಅಂಗನವಾಡಿ ಮಕ್ಕಳಿಗೆ ಮಕ್ಕಳ ದಿನಾಚರಣೆ–ಯ ಮಹತ್ವವನ್ನು ತಿಳಿಸಿ, ಅವರಲ್ಲಿ ಸಂತಸ ಮೂಡಿಸುವ ಚಟುವಟಿಕೆಗಳನ್ನು



ನಡೆಸಲಾಯಿತು. ಮಕ್ಕಳಿಗೆ ಉತ್ತಮ ಶಿಕ್ಷಣ, ಪೌಷ್ಟಿಕ ಆಹಾರ ಹಾಗೂ ಪ್ರೀತಿ, ಕಾಳಜಿಯ ವಾತಾವರಣ ಕಲ್ಪಿಸುವ ಮೂಲಕ ಅವರ ಸರ್ವತೋಮುಖ ಬೆಳವಣಿಗೆಗೆ ಆದ್ಯತೆ ನೀಡಬೇಕು ಎಂಬ ಸಂದೇಶ ಸಾರಲಾಯಿತು.

ಕಾರ್ಯಕ್ರಮದಲ್ಲಿ ಅಂಗನವಾಡಿ ಕಾರ್ಯಕರ್ತೆ, ಸಹಾಯಕಿ ಹಾಗೂ ಮಕ್ಕಳು ಉಪಸ್ಥಿತರಿದ್ದರು.

ಕಾರ್ತಿಕ ಮಾಸದ ಮಹಿಮೆ: ಭಕ್ತಿ, ದೀಪಾರಾಧನೆ ಮತ್ತು ಆಧ್ಯಾತ್ಮಿಕ ಚಿಂತನೆಯ ಪವಿತ್ರ ಕಾಲ

ದೀಪಗಳ ಬೆಳಕಿನಲ್ಲಿ ಧಾರ್ಮಿಕ ಶ್ರದ್ಧೆ, ಶಿವ–ವಿಷ್ಣು ಆರಾಧನೆಗೆ ವಿಶೇಷ ಮಹತ್ವ

“ಮುಂಜಾನೆಯ ಮೆರಗು”

ಜಗಳೂರು ನ, 15– ಹಿಂದೂ ಪಂಚಾಂಗದ ಪ್ರಕಾರ ಆಶ್ವಯುಜ ಮಾಸದ ನಂತರ ಬರುವ ಕಾರ್ತಿಕ ಮಾಸವು ಧಾರ್ಮಿಕ ಆಚರಣೆಗಳ ದೃಷ್ಟಿಯಿಂದ ಮಹತ್ವ ಪಡೆದಿದೆ. ಈ ಮಾಸದಲ್ಲಿ ದೇವಾಲಯಗಳಲ್ಲಿ ವಿಶೇಷ ಪೂಜೆ, ಅಭಿಷೇಕ, ದೀಪಾರಾಧನೆ, ಭಜನೆ, ಪಾರಾಯಣ ಹಾಗೂ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆಯುತ್ತವೆ. ಮನೆಗಳ ಮುಂಭಾಗ, ತುಳಸಿ ಕಟ್ಟೆ, ದೇವಾಲಯಗಳ ಆವರಣ ಮತ್ತು ಪವಿತ್ರ ಸ್ಥಳಗಳಲ್ಲಿ ದೀಪಗಳನ್ನು ಬೆಳಗಿಸುವುದು ಈ ಮಾಸದ ಪ್ರಮುಖ ಆಚರಣೆಯಾಗಿದೆ.

ದೀಪ ಬೆಳಗಿಸುವುದರ ಮಹತ್ವ

ಕಾರ್ತಿಕ ಮಾಸದಲ್ಲಿ ದೀಪ ಬೆಳಗಿಸುವುದಕ್ಕೆ ವಿಶೇಷ ಧಾರ್ಮಿಕ ಅರ್ಥವಿದೆ. ದೀಪವು ಕತ್ತಲೆಯನ್ನು ದೂರ ಮಾಡಿ ಬೆಳಕನ್ನು ನೀಡುವಂತೆ, ಮನುಷ್ಯನ ಬದುಕಿನಲ್ಲಿರುವ ಅಜ್ಞಾನ, ಅಹಂಕಾರ, ಅಸೂಯೆ ಮತ್ತು ದುಷ್ಟ ಆಲೋಚನೆಗಳನ್ನು ದೂರ ಮಾಡಿ ಜ್ಞಾನ, ಶಾಂತಿ ಹಾಗೂ ಸನ್ಮಾರ್ಗದ ಬೆಳಕು ಮೂಡಿಸಬೇಕು ಎಂಬ ಸಂದೇಶವನ್ನು ಸಾರುತ್ತದೆ.

ಸಂಜೆಯ ಸಮಯದಲ್ಲಿ ದೇವಾಲಯಗಳಲ್ಲಿ ದೀಪಗಳನ್ನು ಬೆಳಗಿಸಿ ಭಕ್ತರು ದೇವರ ದರ್ಶನ ಪಡೆಯುತ್ತಾರೆ. ಮನೆಗಳಲ್ಲಿಯೂ ತುಳಸಿ ಕಟ್ಟೆಯ ಮುಂದೆ ದೀಪ ಹಚ್ಚಿ ಪೂಜೆ ಸಲ್ಲಿಸುವ ಸಂಪ್ರದಾಯವಿದೆ. ಕಾರ್ತಿಕ ಮಾಸದ ಪ್ರತಿದಿನವೂ ದೀಪ ಹಚ್ಚುವುದರಿಂದ ಮನೆಯಲ್ಲಿ ಸುಖ, ಶಾಂತಿ, ಸಮೃದ್ಧಿ ನೆಲೆಸುತ್ತದೆ ಎಂಬ ಧಾರ್ಮಿಕ ನಂಬಿಕೆ ಜನರಲ್ಲಿದೆ.

ಶಿವನ ಆರಾಧನೆಗೆ ವಿಶೇಷ ಸ್ಥಾನ

ಕಾರ್ತಿಕ ಮಾಸವು ಶಿವಭಕ್ತರಿಗೆ ಅತ್ಯಂತ ಪವಿತ್ರವಾದ ಕಾಲವಾಗಿದೆ. ಈ



ಸಂದರ್ಭದಲ್ಲಿ ಶಿವಾಲಯಗಳಲ್ಲಿ ವಿಶೇಷ ಅಭಿಷೇಕ, ರುದ್ರಾಭಿಷೇಕ, ಬಿಲ್ವಪತ್ರೆ ಅರ್ಚನೆ ಹಾಗೂ ದೀಪಾರಾಧನೆಗಳನ್ನು ನೆರವೇರಿಸಲಾಗುತ್ತದೆ. ಭಕ್ತರು ಬೆಳಗಿನ ಜಾವ ದೇವಸ್ಥಾನಗಳಿಗೆ ತೆರಳಿ ಶಿವನಿಗೆ ಪೂಜೆ ಸಲ್ಲಿಸುತ್ತಾರೆ. ಸೋಮವಾರದಂದು ಶಿವನ ಆರಾಧನೆಗೆ ಹೆಚ್ಚಿನ ಮಹತ್ವ ನೀಡಲಾಗುತ್ತದೆ.

ಅದರಲ್ಲೂ ಕಾರ್ತಿಕ ಸೋಮವಾರಗಳು ಭಕ್ತರಿಗೆ ವಿಶೇಷ ದಿನಗಳಾಗಿವೆ. ಉಪವಾಸ, ಪೂಜೆ, ಧ್ಯಾನ ಹಾಗೂ ಶಿವನಾಮ ಸ್ಮರಣೆಯ ಮೂಲಕ ಭಕ್ತರು ಆಧ್ಯಾತ್ಮಿಕ ನೆಮ್ಮದಿ ಪಡೆಯಲು ಪ್ರಯತ್ನಿಸುತ್ತಾರೆ.

ತುಳಸಿ ಪೂಜೆ ಮತ್ತು ವಿಷ್ಣು ಆರಾಧನೆ

ಕಾರ್ತಿಕ ಮಾಸದ ಶುಕ್ಲಪಕ್ಷದ ದ್ವಾದಶಿ ದಿನವನ್ನು ತುಳಸಿ ವಿವಾಹದ ಆಚರಣೆಗೆ ಮೀಸಲಿಡಲಾಗುತ್ತದೆ. ಈ ದಿನ ತುಳಸಿ ಗಿಡವನ್ನು ವಿಷ್ಣುವಿನ ಸ್ವರೂಪವಾದ ಸಾಲಿಗ್ರಾಮ ಅಥವಾ ಕೃಷ್ಣನೊಂದಿಗೆ ವಿವಾಹ ಮಾಡುವ ಸಂಪ್ರದಾಯವಿದೆ. ಇದನ್ನು ತುಳಸಿ ಕಲ್ಯಾಣ ಎಂದೂ ಕರೆಯುತ್ತಾರೆ.

ಕಾರ್ತಿಕ ಪೂರ್ಣಿಮೆಯ ಮಹತ್ವ

ಕಾರ್ತಿಕ ಮಾಸದ ಕೊನೆಯ ದಿನವಾದ ಕಾರ್ತಿಕ ಪೂರ್ಣಿಮೆಯು ಅತ್ಯಂತ ಪವಿತ್ರವಾದ ದಿನವಾಗಿದೆ. ಈ ದಿನ ನದಿ, ಕೆರೆ ಹಾಗೂ ಪವಿತ್ರ ಜಲಾಶಯಗಳಲ್ಲಿ ಸ್ನಾನ ಮಾಡಿ ದೇವರ ದರ್ಶನ ಪಡೆಯುವುದು, ದೀಪದಾನ ಮಾಡುವುದು ಮತ್ತು ದಾನಧರ್ಮಗಳಲ್ಲಿ ತೊಡಗಿಸಿಕೊಳ್ಳುವುದು ವಿಶೇಷವೆಂದು ಭಾವಿಸಲಾಗಿದೆ.

ದಾನ, ಧರ್ಮ ಮತ್ತು ಸೇವೆಗೆ ಆದ್ಯತೆ

ಕಾರ್ತಿಕ ಮಾಸವು ಕೇವಲ ಪೂಜೆ, ವ್ರತಗಳಿಗೆ ಸೀಮಿತವಾಗಿಲ್ಲ. ಬಡವರಿಗೆ ಅನ್ನದಾನ ಮಾಡುವುದು, ನಿರ್ಗತಿಕರಿಗೆ ನೆರವು ನೀಡುವುದು, ಗೋಸೇವೆ, ಪರಿಸರ ಸಂರಕ್ಷಣೆ ಹಾಗೂ ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಸಿಕೊಳ್ಳುವುದಕ್ಕೂ ಈ ಮಾಸದಲ್ಲಿ ವಿಶೇಷ ಮಹತ್ವ ನೀಡಲಾಗಿದೆ.

ಈ ಮಾಸದಲ್ಲಿ ಸಾತ್ವಿಕ ಆಹಾರ ಸೇವನೆ, ಸತ್ಯವಚನ, ಪರೋಪಕಾರ, ಕೋಪ ನಿಯಂತ್ರಣ, ಹಿರಿಯರಿಗೆ ಗೌರವ ನೀಡುವುದು ಹಾಗೂ ಮನಸ್ಸನ್ನು ಶುದ್ಧವಾಗಿಟ್ಟುಕೊಳ್ಳುವಂತಹ ಮೌಲ್ಯಗಳನ್ನು ಪಾಲಿಸುವಂತೆ ಧಾರ್ಮಿಕ ಪರಂಪರೆ ತಿಳಿಸುತ್ತದೆ.

ಒಟ್ಟಿನಲ್ಲಿ ಕಾರ್ತಿಕ ಮಾಸವು ಕೇವಲ ಧಾರ್ಮಿಕ ಆಚರಣೆಗಳ ಮಾಸವಲ್ಲ; ಅದು ಕತ್ತಲೆಯಿಂದ ಬೆಳಕಿನೆಡೆಗೆ, ಅಜ್ಞಾನದಿಂದ ಜ್ಞಾನದ ಕಡೆಗೆ, ಸ್ವಾರ್ಥದಿಂದ ಪರೋಪಕಾರದ ಕಡೆಗೆ ಸಾಗುವ ಜೀವನದ ಸಂದೇಶವನ್ನು ಸಾರುವ ಪವಿತ್ರ ಕಾಲವಾಗಿದೆ.



ಗಣೇಶ ದೇವಸ್ಥಾನದಲ್ಲಿ ವಿಶೇಷ ಪೂಜೆ
ಭಕ್ತರಿಗೆ ತೀರ್ಥಪ್ರಸಾದ ವಿತರಣೆ

“ಮುಂಜಾನೆಯ ಮೆರಗು”

ಜಗಳೂರು ನ, 15– ಪಟ್ಟಣದ ಕಟ್ಟಿಗೆಹಳ್ಳಿ ಖಾನಾವಳಿ ಮುಂಭಾಗದಲ್ಲಿರುವ ಗಣೇಶ ದೇವಸ್ಥಾನದಲ್ಲಿ ವಿಶೇಷ ಪೂಜಾ ಕಾರ್ಯಕ್ರಮವನ್ನು ಭಕ್ತಿಭಾವದಿಂದ ನೆರವೇರಿಸಲಾಯಿತು.

ದೇವಸ್ಥಾನದಲ್ಲಿ ಗಣಪತಿಗೆ ವಿವಿಧ ಪೂಜಾ ವಿಧಿವಿಧಾನಗಳನ್ನು ನೆರವೇರಿಸಿ, ಹೂವುಗಳಿಂದ ವಿಶೇಷವಾಗಿ ಅಲಂಕರಿಸಲಾಗಿತ್ತು. ಬೆಳಗ್ಗೆಯಿಂದಲೇ ದೇವಸ್ಥಾನಕ್ಕೆ ಆಗಮಿಸಿದ ಭಕ್ತರು ಗಣೇಶನ ದರ್ಶನ ಪಡೆದು ಪೂಜೆ ಸಲ್ಲಿಸಿ, ತಮ್ಮ ಕುಟುಂಬದ ಸುಖ, ಶಾಂತಿ, ಆರೋಗ್ಯ ಹಾಗೂ ಸಮೃದ್ಧಿಗಾಗಿ ಪ್ರಾರ್ಥಿಸಿದರು.

ಈ ಸಂದರ್ಭದಲ್ಲಿ ದೇವಸ್ಥಾನಕ್ಕೆ ಆಗಮಿಸಿದ ಭಕ್ತಾದಿಗಳಿಗೆ ತೀರ್ಥಪ್ರಸಾದದ ವ್ಯವಸ್ಥೆ ಮಾಡಲಾಗಿತ್ತು.



ಭಕ್ತರು ಶ್ರದ್ಧಾಭಕ್ತಿಯಿಂದ ಪೂಜಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ದೇವರ ಕೃಪೆಗೆ ಪಾತ್ರರಾದರು.

ಉಚ್ಚೆಂಗೆಮ್ಮ ದೇವಿಗೆ ವಿಶೇಷ ಪೂಜೆ

“ಮುಂಜಾನೆಯ ಮೆರಗು”

ಜಗಳೂರು ನ, 15– ವಿಧಾನಸಭಾ ಕ್ಷೇತ್ರದ ಐತಿಹಾಸಿಕ ಧಾರ್ಮಿಕ ಕ್ಷೇತ್ರವಾದ ಉಚ್ಚಂಗಿದುರ್ಗದ ಶ್ರೀ ಉಚ್ಚೆಂಗೆಮ್ಮ ದೇವಾಲಯದಲ್ಲಿ ಕಾರ್ತಿಕ ಮಾಸದ ಅಂಗವಾಗಿ ವಿಶೇಷ ಪೂಜಾ ಕೈಂಕರ್ಯಗಳನ್ನು ಭಕ್ತಿಭಾವದಿಂದ ನೆರವೇರಿಸಲಾಯಿತು.

ಕಾರ್ತಿಕ ಮಾಸದ ಹಿನ್ನೆಲೆಯಲ್ಲಿ ದೇವಿಗೆ ವಿಶೇಷ ಅಲಂಕಾರ ಮಾಡಲಾಗಿದ್ದು, ವಿವಿಧ ಧಾರ್ಮಿಕ ವಿಧಿವಿಧಾನಗಳೊಂದಿಗೆ ಪೂಜೆ ಸಲ್ಲಿಸಲಾಯಿತು. ದೇವಿಯ ದರ್ಶನ ಪಡೆಯಲು ಬೆಳಗ್ಗೆಯಿಂದಲೇ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ದೇವಾಲಯಕ್ಕೆ ಆಗಮಿಸಿ, ದರ್ಶನ ಪಡೆದು ತಮ್ಮ ಇಷ್ಟಾರ್ಥ ಸಿದ್ಧಿಗಾಗಿ ಪ್ರಾರ್ಥನೆ ಸಲ್ಲಿಸಿದರು.

ಕಾರ್ತಿಕ ಮಾಸವು ಹಿಂದೂ ಧಾರ್ಮಿಕ ಸಂಪ್ರದಾಯದಲ್ಲಿ ವಿಶೇಷ ಮಹತ್ವ ಹೊಂದಿದ್ದು, ಈ ಮಾಸದಲ್ಲಿ ದೇವರ ಆರಾಧನೆ, ದೀಪಾರಾಧನೆ

ಹಾಗೂ ವಿಶೇಷ ಪೂಜೆಗಳಿಗೆ ಹೆಚ್ಚಿನ ಪ್ರಾಶಸ್ತ್ಯ ನೀಡಲಾಗುತ್ತದೆ. ಅದರಂತೆ ಉಚ್ಚಂಗಿದುರ್ಗದ ಉಚ್ಚೆಂಗೆಮ್ಮ ದೇವಿಯ ಸನ್ನಿಧಿಯಲ್ಲಿ ಧಾರ್ಮಿಕ ವಾತಾವರಣ ಮನೆಮಾಡಿತ್ತು.

ದೇವಿಯ ದರ್ಶನಕ್ಕೆ ಆಗಮಿಸಿದ ಭಕ್ತಾದಿಗಳಿಗೆ ದೇವಾಲಯದ ವತಿಯಿಂದ ದಾಸೋಹ ವ್ಯವಸ್ಥೆ ಕಲ್ಪಿಸಲಾಗಿತ್ತು. ಭಕ್ತರು ಅನ್ನಪ್ರಸಾದ ಸ್ವೀಕರಿಸಿ ದೇವಿಯ ಕೃಪೆಗೆ ಪಾತ್ರರಾದರು.

ನೀರಿಲ್ಲದೆ ಬಾಡುತ್ತಿವೆ ಜಗಳೂರು ಪಟ್ಟಣದ ಉದ್ಯಾನವನಗಳು!

ಟ್ಯಾಂಕರ್ ಮೂಲಕ ನೀರು ಪೂರೈಸಿ ಹಸಿರು ವನಗಳನ್ನು ಉಳಿಸಲು ಸಾರ್ವಜನಿಕರ ಒತ್ತಾಯ

“ಮುಂಜಾನೆಯ ಮೆರಗು”

ಜಗಳೂರು ನ, 15– ಮಳೆ ಕೊರತೆ ಹಾಗೂ ಸಮರ್ಪಕ ನಿರ್ವಹಣೆಯ ಅಭಾವದಿಂದ ಪಟ್ಟಣದಲ್ಲಿರುವ ಉದ್ಯಾನವನಗಳು ಬಾಡುವ ಹಂತ ತಲುಪಿದ್ದು, ಹಸಿರಿನಿಂದ ಕಂಗೊಳಿಸಬೇಕಾದ ಉದ್ಯಾನವನಗಳು ಇದೀಗ ನೀರಿಲ್ಲದೆ ಒಣಗುವ ಸ್ಥಿತಿ ನಿರ್ಮಾಣವಾಗಿದೆ. ಪಟ್ಟಣ ಪಂಚಾಯಿತಿ ವತಿಯಿಂದ ಟ್ಯಾಂಕರ್ ಮೂಲಕ ನೀರಿನ ವ್ಯವಸ್ಥೆ ಕಲ್ಪಿಸಿದರೆ ಉದ್ಯಾನವನಗಳಲ್ಲಿರುವ ಗಿಡಮರಗಳನ್